ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ಕನ್ನಡದಿನ ಪತ್ರಿಕೆ

ರಾಯಚೂರಿನಿಂದ ರಾಜ್ಯದವರೆಗೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117


ಸಂಪುಟ : Volume : 03 | ಸಂಚಿಕೆ Issuse : 158 | ದಿನಾಂಕ : 08-04-2026 Date : 08-04-2026 | ಬುಧವಾರ Wednesday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಗೋಶಾಲೆಗೆ ಸೇರಿ ಜಾಗ ಖಾಸಗಿಯವರಿಗೆ ಆಸ್ತಿವರ್ಗಾವಣೆ

# ಎಸಿ ಆದೇಶ ರದ್ದುಗೊಳಿಸಿದ ಡಿಸಿ..!

■ ಕನ್ನಡ ಮಾತೃ ಭೂಮಿ ವಾರ್ತೆ

- ಹೈಕೋರ್ಟನಲ್ಲಿ ಪ್ರಕರಣ ವಿಚಾರಣೆಯಲ್ಲಿದ್ದರೂ ಆಸ್ತಿವರ್ಗಾವಣೆ
- ಕಂದಾಯ ದಾಖಲೆ ಪರಿಶೀಲಿಸದೇ ಆದೇಶ ರದ್ದು
- ಅನಧಿಕೃತ ಅಂಗಡಿಗಳ ತೆರವು ಹೊಣೆ ಪಾಲಿಕೆದ್ದು




**ರಾಯಚೂರು, ಏ.7-**ನಗರದ ಗಂಜ್ ವೃತ್ತ ಬಳಿಯಿರುವ ಗೋಶಾಲಾ ಸಂಘಕ್ಕೆ ಸೇರಿದ ಜಮೀನು ಖಾಸಗಿರುವರು ಸುಪರ್ದಿಗೆ ಪಡೆದ ಪ್ರಕರಣದಲ್ಲಿ ಜಿಲ್ಲಾಧಿಕಾರಿ ನಿತೀಶ್ ಇವರು ಹಿಂದಿನ ಸಹಾಯಕ ಆಯುಕ್ತರು ಹೊರಡಿಸಿದ್ದ ಆದೇಶವನ್ನು ರದ್ದುಗೊಳಿಸಿ ದಾಖಲೆಗಳಲ್ಲಿ ಪುರಸಭೆಯಂದು ನಮೂದಿಸಲು ಸೂಚನೆ ನೀಡಿದ್ದಾರೆ.

ಗೋಶಾಲಾ ಸಂಘಕ್ಕೆ ಸೇರಿದ ಜಾಗವನ್ನು ಅರ್ಹತೆಯಿಲ್ಲದೇ ಇದ್ದರೂ (3/2022-23 ದಿನಾಂಕ 20-2-23) ಮತ್ತು( 3/2022-23 ದಿನಾಂಕ 9-9-2024 ) ಹಿಂದಿನ ಸಹಾಯಕ ಆಯುಕ್ತರು ಹೊರಡಿದ್ದ ಆದೇಶವನ್ನು ಜಿಲ್ಲಾಧಿಕಾರಿಗಳು ರದ್ದುಗೊಳಿಸಿದ್ದಾರೆ.

ಗೋಶಾಲೆ ಸೇರಿದ ಸರ್ವೆ 254/★/ಬಿ ರಲ್ಲಿರುವ 4 ಎಕರೆ 6 ಗುಂಟೆ ಭೂಮಿಯನ್ನು ಕಳೆದ 80 ವರ್ಷಗಳಿಮದ ಗೋಶಾಲೆಗೆ ಸೇರಿ ಜಮೀನಾಗಿದ್ದರೂ ನರಸಿಂಗ್ ಬಾನು ಸೇರಿ ಆರು ಜನರು ನಮ್ಮದೇ ಜಮೀನು ಎಂದು ಹಕ್ಕು ಸಲ್ಲಿಸಿದ್ದರು. ಜಿಲ್ಲಾ ನ್ಯಾಯಾಲಯದಲ್ಲಿ ಅರ್ಜಿ ತಿರಸ್ಕರತಗೊಂಡಿದ್ದರೂ ಹೈಕೋರ್ಟನಲ್ಲಿ ಅರ್ಜಿಸಲ್ಲಿಸಿದ್ದು ವಿಚಾರಣೆ ಬಾಕಿಯಿದೆ. ಈ ಮಧ್ಯೆ ರಾಯಚೂರು ಸಹಾಯಕ ಆಯುಕ್ತರು (ಆರ್‌ಎಸ್‌ಎ ಸಂಖ್ಯೆ 200327/2021) ಅರ್ಜಿ ಬಾಕಿಯಿರುವಾಗಪ್ರತಿವಾದಿಗಳ ಅರ್ಜಿಯನ್ನು ಪರಿಗಣಿಸಿ 4 ಎಕರೆ 6 ಗುಂಟೆ ಜಮೀನಲ್ಲಿ ಹೆಸರು ನಮೂದಿಸಲು 2-2.2023 ರಂದು ಆದೇಶಿಸಿದ್ದರು. ಅರ್ಜಿದಾರರಿಗೆ ನೋಟಿಸ್ ನೀಡದೇ ಸಹಾಯಕ ಆಯುಕ್ತರು ಕಂದಾಯ ಇಲಾಖೆ ದಾಖಲೆಗಳನ್ನು ಪರಿಶೀಲಿಸದೇ ಇರುವದನ್ನು ಜಿಲ್ಲಾಧಿಕಾರಿಗಳು ಉಲ್ಲೇಖಿಸಿ ಸಹಾಯಕ ಆಯುಕ್ತ ಅರ್ಜಿಯನ್ನು ತಿರಸ್ಕರಿಸಿದ್ದಾರೆ.

ಕಂದಾಯ ಇಲಾಖೆ ದಾಖಲೆಗಳಂತೆ ಮುಕುಂದ ಸಿಂಗ್ ಹೆಸರಿನಲ್ಲಿದ್ದು, 1961 ಸಮಯದಲ್ಲಿ ಗೋಶಾಲೆ ಹೆಸರಿನಲ್ಲಿ 4 ಎಕರೆ 6 ಗುಂಟೆ ವಿಸ್ತಾರದಲ್ಲಿರುವದು ಪತ್ತೆಯಾಗಿದೆ. 1965 ರಲ್ಲಿ ದಾಖಲೆಗಳಲ್ಲಿ ಪುರಸಭೆ ಹೆಸರು ಆರ್‌ಟಿಸಿ ಕಲಂ 9 ಮತ್ತು 12 ಕಾಣಿಸಿಕೊಂಡಿದೆ. 1947 ರಿಂದ 1961-62 ವರೆಗಿನ ಕಂದಾಯ ಇಲಾಖೆ ಕಂದಾಯ ನಮೂದುಗಳಲ್ಲಲಿ ಗಣಪತಿ ಸಿಂಗ್ ನರಸಿಂಗ್ ಬಾನ್ ಇವರ ಹೆಸರಿನಲ್ಲಿದೆ. ರಾಯಚೂರು ಸಹಾಯಕ ಆಯಕ್ತರು ದಾಖಲೆಗಳನ್ನುಪರಿಶೀಲಸಿದೇ ಆದೇಶ ಮಾಡಿದ್ದರು. ಎಸಿ ಆದೇಶ ಪ್ರಶ್ನಿಸಿ ನರೇಂದ್ರ ಮೂಧಾ ಇವರು ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದರು. ದೂರಿನ ವಿಚಾರಣೆ ನಡೆಸಿರುವ ಜಿಲ್ಲಾಧಿಕಾರಿಗಳು ಸಹಾಯಕ ಆಯುಕ್ತ ಆದೇಶ ರದ್ದುಗೊಳಿಸಿದ್ದಾರೆ.

ನರಸಿಂಗ್ ಭಾನು ಇವರು ಸಲ್ಲಿಸಿದ್ದ ಅರ್ಜಿಯಲ್ಲಿ 20.5.1965 ರಲ್ಲಿ 4 ಎಕರೆ 18 ಗುಂಟೆ ಭೂಮಿ ಮಾರಾಟ ಮಾಡಿದಾಗ ದಕ್ಷಿಣಮತ್ತು ಪೂರ್ವಭಾಗದಲ್ಲಿ ಗೋಶಾಲೆ ಇದೆ ಎಂದು ಸ್ಪಷ್ಟ ಉಲ್ಲೇಖಿದೆ.

ಹೈಕೋರ್ಟನಲ್ಲಿ ವಿಚಾರಣೆರಯಲ್ಲಿದ್ದರೂ ಸಹಾಯಕ ಆಯುಕ್ತರು ಜಮೀನು ವಿಭಜಿಸಿ ನ್ಯಾಯಾಲಯ ಆದೇಶ ಉಲ್ಲಂಘಿಸಿರುವದನ್ನು ಸಹ ಉಲ್ಲೇಖಿಸಿ ಪರಿಷ್ಕತ ಅರ್ಜಿಯನ್ನು ತಿರಸ್ಕರಿಸಲಾಗಿದೆ. ಹೈಕೋರ್ಟನ ಆದೇಶಕ್ಕೆ ಅನ್ವಯಿಸಿ ಜಿಲ್ಲಾಧಿಕಾರಿಗಳು ಎಸಿ ಮಾಡಿರುವ ಆದೇಶ ರದ್ದುಗೊಳಿಸಲಾಗಿದೆ. ಗೋ ಶಾಲೆ ಪರವಾಗಿ ಹಿರಿಯ ನ್ಯಾಯವಾದಿ ಎಸ್. ಕೆ.ಪುರೋಹಿತ್, ಮಹಾನಗರ ಪಾಲಿಕೆ ಪರವಾಗಿ ಎನ್. ಶಿವಶಂಕರ ಇವರು ವಾದ ಮಂಡಿಸಿದ್ದರು.

ಈಗಾಗಲೇ ಪ್ರತಿವಾದಿಗಳು ಸ್ಥಳದಲ್ಲಿ ಅಂಗಡಿಗಳಿಗೆ ಬಾಡಿಗೆ ನೀಡಿದ್ದಾರೆ. ಆರ್‌ಡಿಎ ಸೇರಿದಂತೆ ಯಾವುದೇ ಅನುಮತಿಯಿಲ್ಲದೇ ಅಂಗಡಿಗಳನ್ನು ನಿರ್ಮಾಣ ಮಾಡಲಾಗಿದೆ. ಜಿಲ್ಲಾಧಿಕಾರಿಗಳ ಆದೇಶದ ಹಿನ್ನಲೆಯಲ್ಲಿ ಮಹಾನಗರ ಪಾಲಿಕೆ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸುತ್ತದೆ ಎನ್ನುವದು ಚರ್ಚೆಗೆ ಗ್ರಾಸವಾಗಿದೆ.

## ದರ್ವೇಶ ಕಂಪನಿ ವಂಚನೆ ಪ್ರಕರಣ: ಸಿರಾಜ್ ಜಾಫ್ರಿ ಜಾಮೀನು ಅರ್ಜಿ ತಿರಸ್ಕೃತ



**ರಾಯಚೂರು, ಏ.7-** ದರ್ವೇಶ ಕಂಪನಿಯಿಂದ ಆಗಿರುವ ವಂಚನೆ ಪ್ರಕರಣದಲ್ಲಿ ಆರೋಪಿಯಾಗಿರುವ ಸಿರಾಜ್ ಅಹ್ಮದ್ ಜಾಫ್ರಿಯವರ ಅರ್ಜಿಯನ್ನು ಕಲ್ಬುರ್ಗಿ ಪೀಠ ತಿರಸ್ಕರಿಸಿದೆ. ಯರಮರಸ್ ನಿವಾಸಿ ಸಮ್ರೀನ್ ಬಾನು ಎಂಬುವವರು ನೀಡಿದ್ದ ದೂರಿನ ಮೇರೆಗೆ15 ಜನರ ವಿರುದ್ಧ ಕೇಸ್ ದಾಖಲಾಗಿತ್ತು. ನಕಲಿ ದಾಖಲೆ ಸೃಷ್ಟಿಸಿ ದರ್ವೇಶ ಕಂಪನಿಯಲ್ಲಿ ಹೂಡ ಲಾಗಿದ್ದ ಹಣಕ್ಕೆ ಶೇ.10 ಕಮೀಷನ್ ನೀಡುವದಾಗಿ ನಂಬಿಸಿ ಮೋಸ ಮಾಡಿರುವದಾಗಿ ದೂರು ನೀಡಿದ್ದರು. ಪ್ರಕರ ಣದಲ್ಲಿ ತುರ್ತು ರಕ್ಷಣೆ ಕೋರಿ ಸಿರಾಜ್ ಜಾಫ್ರಿ ಕಲ್ಬುರ್ಗಿ ಪೀಠದಲ್ಲಿ ತಡೆಯಾಜ್ಞೆ ಕೋರಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ಯ ವಿಚಾರಣೆ ನಡೆಸಿದ ಪೀಠ ತುರ್ತು ರಕ್ಷಣೆ ಅಗತ್ಯವಿಲ್ಲ ಎಂದು ಅಭಿಪ್ರಾಯ ಪಟ್ಟು ಜಾಮೀನು ಅರ್ಜಿಯನ್ನು ತಿರಸ್ಕರಿಸಿದೆ.

## ಕೇಂದ್ರ ಸಚಿವ ಪ್ರಲ್ಹಾದ ಜೋಷಿ ಹೇಳಿಕೆ ಖಂಡನಿಯ-ಉಸ್ತಾದ

**ರಾಯಚೂರು,ಏ.7-**ದೇಶದಲ್ಲಿ ಎಲ್‌ಪಿಜಿ ಗ್ಯಾಸ್ ಕೊರತೆ ಸಮಸ್ಯೆ ಉಲ್ಬಣವಾಗಿರುವ ಸಂದರ್ಭದಲ್ಲಿ, ಅದನ್ನು ಸರಿಪಡಿಸುವ ಬದಲು ಗ್ಯಾಸ್ ಸಿಗದಿದ್ದರೆ ಪೆಟ್ರೋಲ್ ಬಳಸಿರಿ ಎಂದು ಹೇಳಿಕೆ ನೀಡಿರುವ ಕೇಂದ್ರ ಸಚಿವ ಪ್ರಲ್ಹಾದ ಜೋಷಿ ವಿರುದ್ಧ ಕೆಪಿಸಿಸಿ ಮಾಧ್ಯಮ ವಿಭಾಗ ರಾಜ್ಯ ವಕ್ತಾರರು ಡಾ.ರಝಾಕ ಉಸ್ತಾದ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಇರಾನ್ ಹಾಗೂ ಅಮೇರಿಕಾ-ಇಸ್ರೇಲ್ ನಡುವೆ ನಡೆಯುತ್ತಿರುವ ಯುದ್ಧ ಪರಿಸ್ಥಿತಿಯನ್ನು ಉಲ್ಲೇಖಿಸುತ್ತಾ, ಒಂದು ಕಡೆ ಗ್ಯಾಸ್ ಕೊರತೆ ಇಲ್ಲ ಎಂದು ಜನರಿಗೆ ಭರವಸೆ ನೀಡುತ್ತಿರುವ ಸಚಿವರು, ಮತ್ತೊಂದೆಡೆ ಗ್ಯಾಸ್ ಸಿಗದಿದ್ದರೆ ಪೆಟ್ರೋಲ್ ಬಳಸುವಂತೆ ಸಲಹೆ ನೀಡಿರುವುದು ಸರ್ಕಾರದ ದ್ವಂದ್ವ ನಿಲುವನ್ನು ತೋರಿಸುತ್ತದೆ ಎಂದು ಟೀಕಿಸಲಾಗಿದೆ.

ಸಮಸ್ಯೆಗೆ ಜವಾಬ್ದಾರಿ ವಹಿಸಲು ಸಾಧ್ಯವಿಲ್ಲದಿದ್ದರೆ ರಾಜೀನಾಮೆ ನೀಡಬೇಕು ಎಂಬ ಆಗ್ರಹವೂ ↘ 2

## ಎಪ್ರಿಲ್ 10 ರಿಂದ ಟೋಲ್‌ಗಳಲ್ಲಿ ನಗದು ಪಾವತಿ ಸಂಪೂರ್ಣ ಸ್ಥಗಿತ: ಯುಪಿಐ ಪೇಮೆಂಟ್‌ಗೆ ಹೆಚ್ಚುವರಿ ಶುಲ್ಕ

**ನವದೆಹಲಿ,ಏ.7-**ರಾಷ್ಟ್ರೀಯ ಹೆದ್ದಾರಿಗಳಲ್ಲಿ ಟೋಲ್ ಸಂಗ್ರಹ ವ್ಯವಸ್ಥೆಯಲ್ಲಿ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ಮಹತ್ತರ ಬದಲಾವಣೆ ಮಾಡಿದೆ. ಎಪ್ರಿಲ್ 10 ರಿಂದ ಎಲ್ಲ ಟೋಲ್ ಪ್ಲಾಜಾಗಳಲ್ಲಿ ನಗದು ಪಾವತಿಯನ್ನು ಸ್ಥಗಿತಗೊಳಿಸಲಾಗಿದೆ.

ಈ ಬಗ್ಗೆ ಗೆಜೆಟ್ ಅಧಿಸೂಚನೆ ಹೊರಡಿಸಿರುವ ಸಚಿವಾಲಯ, ದೇಶದ ಯಾವುದೇ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಇರುವ ಟೋಲ್‌ಗಳಲ್ಲಿ ಇನ್ಮುಂದೆ ನಗದು ಪಾವತಿ ಇರುವುದಿಲ್ಲ. ಎಪ್ರಿಲ್ 10 ರಿಂದ ಇದು ಜಾರಿಯಲ್ಲಿರಲಿದೆ ಎಂದು ತಿಳಿಸಿದೆ.

ಯಾವುದೇ ವಾಹನಗಳು ಟೋಲ್ ಪ್ಲಾಜಾವನ್ನು ಪ್ರವೇಶಿಸುವ ಮುನ್ನ ಫಾಸ್ಟ್‌ಟ್ಯಾಗ್ ಕಡ್ಡಾಯವಾಗಿ ಹೊಂದಿರಬೇಕು.

ಇಲ್ಲವಾದಲ್ಲಿ, ಪ್ರಯಾಣಿಕರು ಯುಪಿಐ ಮೂಲಕ ಮಾತ್ರ ಹಣ ಪಾವತಿಸಬಹುದು. ಆದರೆ, ಈ ↘ 2

## ಆಟೋಗಳಿಗೆ ಗ್ಯಾಸ್ ದರ ಏರಿಕೆ ಖಂಡಿಸಿ ಆಟೋ ಚಾಲಕರ ಪ್ರತಿಭಟನೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.7-**ಆಟೋಗಳಿಗೆ ಬಳಸುವ ಎಲ್‌ಪಿಜಿ ಗ್ಯಾಸ್ ಬೆಲೆ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ನಗರದ ಗೋ ಗ್ಯಾಸ್ 1)ಎಂಬ ಗ್ಯಾಸ್ ಫಿಲ್ಲಿಂಗ್ ಸ್ಟೇಷನ್‌ನಲ್ಲಿ ಆಟೋ ಚಾಲಕರು ಗ್ಯಾಸ್ ಫಿಲ್ಲಿಂಗ್ ಬಂದ್ ಮಾಡಿಸಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಘಟನೆ ಜರುಗಿತು.

ಕಳೆದ 10 ದಿನಗಳಿಂದ ಆಟೋಗಳಿಗೆ ಗ್ಯಾಸ್ ಸಿಗದೇ ಪರದಾಡುತ್ತಿದ್ದು, ಇಂದು ಬೆಳಿಗ್ಗೆ ಗೋ ಗ್ಯಾಸ್ ಕಂಪನಿಯ ಫಿಲ್ಲಿಂಗ್ ಸ್ಟೇಷನ್‌ಗೆ ಗ್ಯಾಸ್ ಟ್ಯಾಂಕರ್‌ವೊಂದು ಗ್ಯಾಸ್ ಡಂಪ್ ಮಾಡಿ ಹೋಗಿದೆ. ಆದರೆ. ಗ್ಯಾಸ್ ದರ ಲೀಟರ್‌ಗೆ 120 ಮಾಡಿದ್ದು, ಗ್ಯಾಸ್ ಹಾಕಿಸಿಕೊಳ್ಳಲು ಬಂದ ಆಟೋ ಚಾಲಕರು ಆತಂಕಗೊಂಡಿದ್ದಾರೆ.

ಭಾರತ್ ಗ್ಯಾಸ್ ಸೇರಿ ಬೇರೆ ಗ್ಯಾಸ್ ಫಿಲ್ಲಿಂಗ್ ಸ್ಟೇಷನ್‌ನಲ್ಲಿ 91-96ರೂ. ಲೀಟರ್‌ಗೆ ದರ ಇದ್ದು, ಆದರೆ ಗೋ ಗ್ಯಾಸ್ ಕಂಪನಿ ಏಕಾಏಕಿ 40 ರೂ. ಏರಿಕೆ ಮಾಡಿ, 120ರೂ. ಪ್ರತಿ ಲೀಟರ್‌ಗೆ ಹೇಳುತ್ತಿದ್ದು, ಇದರಿಂದ ಆಟೋ ಓಡಿಸಿ, ಅದರಲ್ಲಿ ಹಣ ಉಳಿಸುವುದು ಅತ್ಯಂತ ಕಷ್ಟಕರವಾಗಿದೆ ಎಂದು ಆಟೋ ಚಾಲಕರು ಅಸಮಧಾನ ವ್ಯಕ್ತಪಡಿಸಿದರು.

2-3 ದಿನಗಳ ಹಿಂದೆ ಲೀಟರ್‌ಗೆ 84 ರೂ.ದರ ನಿಗಧಿ ಮಾಡಿದ್ದರು. ಆದರೆ ಇದೀಗ ಏಕಾಏಕಿ ದರವನ್ನು 120ರೂ. ಮಾಡಿದ್ದು, ಆಟೋ ಚಾಲಕರು ಬದುಕು ನಡೆಸುವುದು ಕಷ್ಟಕರವಾಗಿದೆ. ಕೂಡಲೇ ಜಿಲ್ಲಾಡಳಿತ ಆಟೋ ಚಾಲಕರ, ಆಟೋ ಗ್ಯಾಸ್ ↘ 2

## ಕ್ರಿಕಟ್ ಬೆಟ್ಟಿಂಗ್: 4 ತಿಂಗಳಲ್ಲ 26 ಪ್ರಕರಣ ದಾಖಲು ಬೆಟ್ಟಿಂಗ್ ನಡೆಸಿದರೆ ಕಾನುನು ಕ್ರಮ-ಎಸ್‌ಪಿ ಎಚ್ಚರಿಕೆ

■ ಕನ್ನಡ ಮಾತೃ ಭೂಮಿ ವಾರ್ತೆ



**ರಾಯಚೂರು,ಏ.7-**ಸಜಿಲ್ಲೆಯಲ್ಲಿ ಕ್ರಿಕೆಟ್ ಬೆಟ್ಟಿಂಗ್‌ಗೆ ಸಂಬಂಧಿಸಿದಂತೆ ಪೊಲೀಸ್ ಇಲಾಖೆಯಿಂದ ಕಳೆದ 4 ತಿಂಗಳಿನಲ್ಲಿ ದಾಳಿ ನಡೆಸಿ ಒಟ್ಟು 26 ಕೇಸ್‌ಗಳನ್ನು ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶುಗಿರಿ ತಿಳಿಸಿದರು.

ಈ ಬಗ್ಗೆ ಮಾಧ್ಯಮ ಹೇಳಿಕೆ ನೀಡಿರುವ ಅವರು,ಕಳೆದ ಜನವರಿಯಿಂದ ಈವರೆಗೆ ಒಟ್ಟು 26 ಕ್ರಿಕೆಟ್ ಬೆಟ್ಟಿಂಗ್ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಅದರಲ್ಲಿ 70 ಜನ ಆರೋಪಿಗಳಿಂದ 87,110 ರೂ. ನಗದು ಹಣ ಹಾಗೂ ಬೆಟ್ಟಿಂಗ್‌ಗೆ ಬಳಸುತ್ತಿದ್ದ 86,400ರೂ. ಬೆಲೆ ಬಾಳುವ 20 ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಜನವರಿಯಲ್ಲಿ 1 ಕೇಸ್‌ನಲ್ಲಿ ಒಬ್ಬ ಆರೋಪಿಯಿಂದ 4500 ರೂ.ನಗದು ಹಾಗೂ 1 ಮೊಬೈಲ್ ಫೋನ್ ವಶಪಡಿಸಿಕೊಳ್ಳಲಾಗಿದೆ. ಫೆಬ್ರವರಿಯಲ್ಲಿ 16 ಕೇಸ್‌ಗಳಲ್ಲಿ 57 ಆರೋಪಿಗಳಿಂದ 70,900ರೂ. ಹಾಗೂ 76,000 ಮೌಲ್ಯದ 13 ಮೊಬೈಲ್ ಫೋನ್‌ಗಳನ್ನು ಜಪ್ತಿಪಡಿಸಿಕೊಳ್ಳಲಾಗಿದೆ.

ಮಾರ್ಚ್‌ನಲ್ಲಿ 5 ಕೇಸ್‌ಗಳಲ್ಲಿ 6 ಆರೋಪಿಗಳಿಂದ 6790 ರೂ.ಹಾಗೂ 5 ಮೊಬೈಲ್ ಫೋನ್‌ಗಳು, ಏಪ್ರಿಲ್‌ನಲ್ಲಿ 4 ಕೇಸ್ ದಾಖಲಿಸಲಾಗಿದ್ದು, 6 ಜನರ ವಿರುದ್ಧ ಪ್ರಕರಣ ದಾಖಲಾಗಿದೆ. 4920 ರೂ.ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ಸುತ್ತಮುತ್ತಲೂ ಕ್ರಿಕೆಟ್ ಬೆಟ್ಟಿಂಗ್ ಸೇರಿ ಇನ್ನಿತರ ಅಪರಾಧಗಳು ಕಂಡುಬಂದಲ್ಲಿ ಪೊಲೀಸ್ ತುರ್ತು ಸಹಾಯವಾಣಿ 112ಗೆ ಕರೆ ಮಾಡಿ ಮಾಹಿತಿ ನೀಡುವಂತೆ ಮನವಿ ಮಾಡಿದರು.

## ಬಿಜೆಪಿ, ಆರ್‌ಎಸ್‌ಎಸ್ ವಿಷಕಾರಿ ಹಾವುಗಳಂತೆ, ಖರ್ಗೆ ವಿರುದ್ಧ ಪೊಲೀಸರು, ಚುನಾವಣಾ ಆಯೋಗಕ್ಕೆ ಬಿಜೆಪಿ ದೂರು..!

**ಗುವಾಹಟಿ,ಏ.7-**ದ್ವೇಷಪೂರಿತ ಭಾಷಣ ಮಾಡಿದ ಆರೋಪದ ಮೇಲೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಅಸ್ಸಾಂ ಪೊಲೀಸರು ಮತ್ತು ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಿರುವುದಾಗಿ ಅಸ್ಸಾಂ ಬಿಜೆಪಿ ಮಂಗಳವಾರ ತಿಳಿಸಿದೆ.

ಸಂವಿಧಾನವನ್ನು ಎತ್ತಿಹಿಡಿಯುತ್ತೇವೆ ಎಂದು ಕಾಂಗ್ರೆಸ್ ನಾಯಕರು ಪದೇ ಪದೇ ಹೇಳುತ್ತಿರುತ್ತಾರೆ. ಆದರೆ ಅವರ ಕ್ರಮಗಳು ಸಾಂವಿಧಾನಿಕ ಸ್ವಾತಂತ್ರ್ಯ ಮತ್ತು ಎಲ್ಲಾ ನಂಬಿಕೆಗಳನ್ನು ಸ್ಪಷ್ಟವಾಗಿ ವಿರೋಧಿಸುತ್ತವೆ ಎಂದು ಅಸ್ಸಾಂ ಬಿಜೆಪಿ ವಕ್ತಾರ ಪ್ರಾಂಜಲ್ ಕಲಿತಾ ಹೇಳಿದ್ದಾರೆ.

ಈ ಸಂಬಂಧ ಗುವಾಹಟಿಯ ಬಸಿಸ್ತಾ ಪೊಲೀಸ್ ಠಾಣೆಯಲ್ಲಿ ಒಂದು ದೂರು ದಾಖಲಾಗಿದೆ. ಚುನಾವಣಾ ಆಯೋಗದಲ್ಲಿ ಇನ್ನೊಂದು ದೂರು ದಾಖಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಆರ್‌ಎಸ್‌ಎಸ್-ಬಿಜೆಪಿಯನ್ನು ನಿಷೇಧಿಸುವಂತೆ ಖರ್ಗೆ ಅವರ ಇತ್ತೀಚಿಗೆ ಹೇಳಿಕೆಯು ರಾಜಕೀಯ ಅಸಹಿಷ್ಣುತೆಯನ್ನು ಪ್ರತಿಬಿಂಬಿಸುತ್ತದೆ. ↘ 2

## ಬಸವ ಕಲ್ಯಾಣದ ಕೆರೆಯಲ್ಲಿ ಹಡಪದ ಅಪ್ಪಣ್ಣ ಪುತ್ಥಳಿ ಸ್ಥಾಪನೆಗೆ ಆಗ್ರಹಿಸಿ ಮನವಿ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.7-**ಬೀದರ ಜಿಲ್ಲೆಯ ಬಸವಕಲ್ಯಾಣದ ಅನುಭವ ಮಂಟಪದ ತ್ರಿಪುರಾಂತಕ ಕೆರೆ ಹತ್ತಿರದ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಅಪ್ಪಣ್ಣನವರ ಮೂರ್ತಿ ಪುನಃ ಪ್ರತಿಷ್ಠಾಪನೆ ಮಾಡಬೇಕು ಎಂದು ಹಡಪದ ಅಪ್ಪಣ ಸಮಾಜ ಸೇವಾ ಸಂಘ ಜಿಲ್ಲಾ ಘಟಕದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಸ್ಥಾನಿಕ ಅಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಬೀದರ ಜಿಲ್ಲೆಯ ಬಸವ ಕಲ್ಯಾಣದಲ್ಲಿರುವ ಅನುಭವ ಮಂಟಪದ ತ್ರಿಪುರಾಂತಕ ಕೆರೆ ಹತ್ತಿರ 12ನೇ ಶತಮಾನದ ಅನೇಕ ಬಸವಾದಿ ಶರಣರ ಅರಿವಿನ ಗವಿಗಳು ಇರುವುದಾಗಿ ಇತಿಹಾಸ ಸಾರುತ್ತದೆ. ವಿಶ್ವಗುರು ಸಾಂಸ್ಕೃತಿಕ ನಾಯಕ ಬಸವಣ್ಣನವರ ಅರಿವಿನ ಗುಹೆ ಪಕ್ಕದಲ್ಲಿಯ ಅವರ ಆಪ್ತ ಕಾರ್ಯದರ್ಶಿಯಾಗಿದ್ದ ಶಿವಶರಣ ಹಡಪದ ಅಪ್ಪಣನವರ ಅರಿವಿನ ಗವಿಯೂ ಅಲ್ಲಿ ಅಸ್ತಿತ್ವದಲ್ಲಿದೆ. ಆದರೆ ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿಯನ್ನು ಬಸವೇಶ್ವರ ದೇವಸ್ಥಾನದ ಪಂಚ ↘ 2

## ಬಾಲಕಾರ್ಮಿಕತೆ ತಡೆಯಲು ಎಲ್ಲಾಇಲಾಖೆ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ-ಎಡಿಸಿ ಶಿವಾನಂದ ಭಜಂತ್ರಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.7-**ಜಿಲ್ಲೆಯಲ್ಲಿ ಹಲವು ಕಾರಣಗಳಿಂದ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪತ್ತೆ ಹಚ್ಚಿ ಆ ಮಕ್ಕಳ ಪೋಷಕರ ಮನವೊಲಿಸಿ ಪುನಃ ಮಕ್ಕಳನ್ನು ಶಾಲೆಗೆ ಬರುವಂತೆ ಮಾಡಲು ಜಿಲ್ಲಾ ಮಟ್ಟದ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಹೇಳಿದರು.

ಅವರಿಂದು ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಕ್ಕಳ ಹಕ್ಕುಗಳಲ್ಲಿ ಶಿಕ್ಷಣ ಎಂಬುವುದು ಕೂಡ ಮೂಲಭೂತ ಹಕ್ಕಾಗಿದ್ದು, ಮಕ್ಕಳಿಗೆ ಕಡ್ಡಾಯ ಶಿಕ್ಷಣ ಒದಗಿಸುವುದು ಪ್ರತಿಯೊಂದು ಇಲಾಖೆಯ ಅಧಿಕಾರಿಗಳ ಹಾಗೂ ಸಾರ್ವಜನಿಕರ ಕರ್ತವ್ಯವಾಗಿದ್ದು, ಗ್ರಾಮೀಣ ಭಾಗದಲ್ಲಿ ಮಕ್ಕಳು ಹೆಚ್ಚಾಗಿ ದುಡಿಯಲು ಹೋಗುತ್ತಾರೆ. ಬಾಲಕಾರ್ಮಿಕತೆ ಬಗ್ಗೆ ಮಾಹಿತಿ ಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಟಾತ್ ದಾಳಿ ನಡೆಸಿ, ಮಕ್ಕಳನ್ನು ರಕ್ಷಿಸಿ, ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಂಡ ಮಾಲಿಕರ ವಿರುದ್ಧ ↘ 2

# ಕಾರ್ಖಾನೆ ದ್ವಾರವೂ ಸಾರ್ವಜನಿಕ ಪ್ರದೇಶ; ವ್ಯಕ್ತಿಗೆ ಜಾತಿಯಿಂದ ನಿಂದಿಸಿದ್ದಲ್ಲಿ ಎಸ್ಸಿ-ಎಸ್ಟಿ ಕಾಯ್ದೆ ಅನ್ವಯ: ಹೈಕೋರ್ಟ್

**ಬೆಂಗಳೂರು,ಏ.7-**ಕಾರ್ಖಾನೆಯ ಉತ್ಪನ್ನಗಳ ಸಾಗಣೆಗಿರುವ ದ್ವಾರದಿಂದ ಸಾರ್ವಜನಿಕರ ಪ್ರವೇಶಕ್ಕೆ ಅವಕಾಶ ಇಲ್ಲದಿದ್ದರೂ ಇತರೆ ಕಾರ್ಮಿಕರ ಪ್ರವೇಶಾವಕಾಶಕ್ಕೆ ಮುಕ್ತ ಅವಕಾಶವಿರುವುದರಿಂದ ಆ ಸ್ಥಳವನ್ನು ಟಿಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಕಾಯ್ದೆಟಿ ಅಡಿಯಲ್ಲಿ ಟಿಸಾರ್ವಜನಿಕ ಪ್ರದೇಶಟಿವಾಗಿ ಪರಿಗಣಿಸಬಹುದು ಎಂದು ಅಭಿಪ್ರಾಯಪಟ್ಟಿರುವ ಹೈಕೋರ್ಟ್, ದ್ವಾರದಲ್ಲಿ ನಿಂತು ಸಿಬ್ಬಂದಿಯೊಬ್ಬರಿಗೆ ಜಾತಿ ನಿಂದನೆ ಮಾಡಿದ ಕಾರ್ಖಾನೆಯ ಮಾಲೀಕರ ವಿರುದ್ಧದ ಪ್ರಕರಣ ರದ್ದುಪಡಿಸುವುದಕ್ಕೆ ಸಾಧ್ಯವಿಲ್ಲ ಎಂದು ಆದೇಶಿಸಿದೆ.

ತಮ್ಮ ವಿರುದ್ಧದ ಎಫ್ಐಆರ್ ರದ್ದು ಕೋರಿ ಧಾರವಾಡದ ಸ್ವಾಮ್ಸ್ ಟೆಕ್ನಾಲಜಿ ಪ್ರೈವೇಟ್ ಲಿಮಿಟೆಡ್ ಕಂಪೆನಿಯ ಮಾಲೀಕರಾದ ಶ್ಯಾಮ್ ಮೆಹ್ತಾ, ಬಿಮಲ್ ಮೆಹ್ತಾ, ನೀಪಾ ಮೆಹ್ತಾ ಎಂಬುವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಹಂಚಾಟೆ ಸಂಜೀವ ಕುಮಾರ್ ಅವರಿದ್ದ ಧಾರವಾಡ ನ್ಯಾಯಪೀಠ ಪೀಠ ಈ ಆದೇಶ ನೀಡಿತು.

ಸಾರ್ವಜನಿಕ ಪ್ರದೇಶ ಎಂದರೆ ಸಾರ್ವಜನಿಕರು ಮಾತ್ರ ಇರಬೇಕು ಎಂಬರ್ಥವಲ್ಲ. ಬದಲಾಗಿ ಯಾವುದೇ ಕಂಪನಿಯ ಸರಕುಗಳ ಸಾಗಣೆ ದ್ವಾರ ನಿರ್ಜನ ಪ್ರದೇಶವಾಗಿರುವುದಿಲ್ಲ.

ಈ ದ್ವಾರದಿಂದ ನೌಕರರು ಸುಲಭವಾಗಿ ಒಳಪ್ರವೇಶ ಮತ್ತು ಹೊರ ಹೋಗುವುದಕ್ಕೆ ಅವಕಾಶ ಇರುತ್ತದೆ. ಆದ್ದರಿಂದ ಕಾರ್ಖಾನೆಯ ದ್ವಾರದಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ್ದ ನೌಕರರನ್ನು ಅವರ ಜಾತಿಯಿಂದ ನಿಂದನೆ ಮಾಡಿದಲ್ಲಿ, ಆರೋಪಿಗಳ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ದೌರ್ಜನ್ಯ ತಡೆ ಕಾಯ್ದೆಯ ಸೆಕ್ಷನ್ 3(1) (ಆರ್)- (ಜಾತಿ ನಿಂದನೆ ಮೂಲಕ ಅವಮಾನ) ಅಡಿಯಲ್ಲಿ ಅಪರಾಧ ಎಂದು ಪರಿಗಣಿಸಬಹುದು ಎಂದು ಅಭಿಪ್ರಾಯಪಟ್ಟಿದೆ. ಕಾಯ್ದೆಯ ಸೆಕ್ಷನ್ 3ರ ಪ್ರಕಾರ, ಜಾತಿ ನಿಂದನೆ ಸಾರ್ವಜನಿಕರಿಗೆ ಕಾಣುವ ಅಥವಾ ಕೇಳುವಂತಿರಬೇಕು ಎಂದು ತಿಳಿಸಲಾಗಿದೆ.

ಆದರೆ, ಸಾರ್ವಜನಿಕ ಸ್ಥಳ ಎಂದರೆ ಕೇವಲ ರಸ್ತೆ, ಪಾರ್ಕ್ ಎಂದರ್ಥವಲ್ಲ. ಒಂದು ಕಾರ್ಖಾನೆಯೊಳಗೆ ಕಾರ್ಮಿಕರು ಕೆಲಸ ಮಾಡುವ ಜಾಗ ಅಥವಾ ಸರಕು ಸಾಗಣೆಗಿರುವ ದ್ವಾರವೂ ಕೂಡ ಸಾರ್ವಜನಿಕ ಪ್ರದೇಶವೇ ಆಗಿರಲಿದೆ. ಅಲ್ಲಿರುವ ಸಹೋದ್ಯೋಗಿಗಳನ್ನು ಟಿಸಾರ್ವಜನಿಕರುಟಿ ಎಂದೇ ಪರಿಗಣಿಸಬೇಕಾಗುತ್ತದೆ ಎಂದು ಪೀಠ ತಿಳಿಸಿದೆ.

ಪ್ರಕರಣದಲ್ಲಿ ಘಟನೆ ನಡೆದು ಆರು ತಿಂಗಳ ನಂತರ ದೂರು ದಾಖಲಿಸಲಾಗಿದ್ದು, ಅದನ್ನು ರದ್ದುಪಡಿಸಬೇಕು ಎಂಬ ಅರ್ಜಿದಾರರ ವಾದವನ್ನು ತಿರಸ್ಕರಿಸಿರುವ ಹೈಕೋರ್ಟ್, ದೂರು ನೀಡಿದ ವ್ಯಕ್ತಿ ಒಬ್ಬ ಬಡ ಕಾರ್ಮಿಕನಾಗಿದ್ದು, ಮಾಲೀಕರ ವಿರುದ್ಧ ತಕ್ಷಣವೇ ದೂರು ನೀಡಿದರೆ ಕೆಲಸ ಕಳೆದುಕೊಳ್ಳುವ ಭೀತಿ ಇರುತ್ತದೆ.

ಜೀವನೋಪಾಯದ ದೃಷ್ಟಿಯಿಂದ ಕಾರ್ಮಿಕ ತಕ್ಷಣ ದೂರು ನೀಡದಿರುವುದು ಸಹಜ. ಇಂತಹ ಸಂದರ್ಭದಲ್ಲಿ ಆರು ತಿಂಗಳ ವಿಳಂಬವನ್ನೇ ನೆಪವಾಗಿಟ್ಟುಕೊಂಡು ಪ್ರಕರಣ ರದ್ದುಗೊಳಿಸಲು ಸಾಧ್ಯವಿಲ್ಲ ಎಂದು ಪೀಠ ಹೇಳಿತು.

ಒಂದು ವೇಳೆ ದೂರುದಾರ ಸುಳ್ಳು ಪ್ರಕರಣ ದಾಖಲಿಸಬೇಕು ಎಂಬ ಉದ್ದೇಶ ಇಟ್ಟುಕೊಂಡಿದ್ದರೆ ಆರು ತಿಂಗಳ ಹಿಂದಿನ ಘಟನೆ ಎಂದು ಹೇಳುವ ಅಗತ್ಯವಿರಲಿಲ್ಲ. ಬದಲಾಗಿ ಇತ್ತೀಚಿನ ದಿನಾಂಕವನ್ನೇ ನೀಡುತ್ತಿದ್ದ. ಹಾಗೆ ಮಾಡದಿರುವುದು ದೂರಿನಲ್ಲಿ ಸತ್ಯಾಂಶವಿದೆ ಎಂಬ ಅಂಶ ಮೇಲ್ನೋಟಕ್ಕೆ ಗೊತ್ತಾಗುತ್ತದೆ ಎಂದು ಪೀಠ ಹೇಳಿದೆ.

ಪ್ರಕರಣದ ಹಿನ್ನೆಲೆ: ದೂರುದಾರ ಯಲ್ಲಪ್ಪ ಕರಿಗಪ್ಪ ಹರಿಜನ್ ಎಂಬುವರು ಸ್ವಿಮ್ಸ್ ಟೆಕ್ನಾಲಜಿ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯಲ್ಲಿ 20 ವರ್ಷಗಳಿಂದ ಕಾರ್ಮಿಕನಾಗಿ ದುಡಿಯುತ್ತಿದ್ದರು. 2024ರ ಜೂನ್ 2ರಂದು ಮಾಲೀಕರು ಫ್ಯಾಕ್ಟರಿಯ ದ್ವಾರದ ಬಳಿ ಬಂದು, ಮೂರನೇ ವ್ಯಕ್ತಿಯೊಬ್ಬರ ಮೇಲೆ ಸುಳ್ಳು ದೂರು ನೀಡುವಂತೆ ಒತ್ತಡ ಹೇರಿದ್ದರು. ಇದಕ್ಕೆ ಕಾರ್ಮಿಕ ನಿರಾಕರಿಸಿದಾಗ, ಮಾಲೀಕರು ಇತರ ಕಾರ್ಮಿಕರ ಸಮ್ಮುಖದಲ್ಲೇ ಆತನ ಜಾತಿಯ ಹೆಸರನ್ನು ಉಲ್ಲೇಖಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದರು. ಕೆಲಸದಿಂದ ತೆಗೆದುಹಾಕುವುದಾಗಿಯೂ ಬೆದರಿಕೆ ಹಾಕಿದ್ದರು.

ಈ ಸಂಬಂಧ 2024ರ ಅಕ್ಟೋಬರ್‌ನಲ್ಲಿ ದೂರು ದಾಖಲಿಸಿದ್ದರು.

ದೂರಿನ ಅನ್ವಯ ಪೊಲೀಸರು, ಅರ್ಜಿದಾರರ ವಿರುದ್ಧ ಐಪಿಸಿ ಸೆಕ್ಷನ್ 504 ಮತ್ತು 506, ಎಸ್ಸಿ ಎಸ್ಟಿ(ದೌರ್ಜನ್ಯ ತಡೆ) ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದರು. ಇದನ್ನು ಪ್ರಶ್ನಿಸಿ ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು.

### ಅಕ್ರಮ ಆಸ್ತಿ ಗಳಿಕೆ ಆರೋಪ

# ಶಿವಮೊಗ್ಗ, ಬಳ್ಳಾರಿ, ಬೆಳಗಾವಿಯ ವಿವಿಧೆಡೆ ಲೋಕಾಯುಕ್ತ ದಾಳಿ






**ಶಿವಮೊಗ್ಗ/ಬಳ್ಳಾರಿ/ಬೆಳಗಾವಿ/ಮೈಸೂರು,ಏ.7-** ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿ ಹಾಗೂ ಇವರ ಸಹದ್ಯೋಗಿಯ ಮನೆ ಸೇರಿದಂತೆ ಒಟ್ಟು 6 ಕಡೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಅಕ್ರಮ ಆಸ್ತಿಗಳಿಕೆ ಆರೋಪದ ಮೇರೆಗೆ ಲೋಕಾಯುಕ್ತ ಪೊಲೀಸರು ಬೆಳ್ಳಂಬೆಳಗ್ಗೆ ಕಾರ್ಯಾಚರಣೆ ನಡೆಸಿದ್ದಾರೆ.

ಶೋಭಾ ಅವರ ಶಿವಮೊಗ್ಗದ ನವಲೆ ಬಡಾವಣೆಯ ರೂಂ, ಶಿಕಾರಿಪುರದ ಚನ್ನಕೇಶವ ನಗರದ ಮನೆ, ಶಿಕಾರಿಪುರ ತಾಲೂಕು ತರಲಘಟ್ಟದ ತೋಟದ ಮನೆ, ಸಾಗರ ತಾಲೂಕು ಆಚಾಪುರದ ಮಲ್ನಾಡ್ ಇಂಟರ್ ನ್ಯಾಶನಲ್ ಸ್ಕೂಲ್‌ಗಳ ಮೇಲೆ ದಾಳಿ ನಡೆಸಲಾಗಿದೆ. ಬಿಸಿಎಂ ಇಲಾಖೆಯ ಅಧಿಕಾರಿ ರಾಘವೇಂದ್ರ ಅವರ ಶಿವಮೊಗ್ಗದ ಚಾಲುಕ್ಯನಗರ ಬಡಾವಣೆಯ ಮನೆ ಹಾಗೂ ಬಾಲರಾಜ್ ಅರಸ್ ರಸ್ತೆಯ ದೇವರಾಜ್ ಅರಸ್ ಭವನದ ಕಚೇರಿಗಳ ಮೇಲೆಯೂ ದಾಳಿ ನಡೆಸಲಾಗಿದೆ.

ಶಿವಮೊಗ್ಗ ಡಿವೈಎಸ್ಪಿ ಚಂದ್ರಶೇಖರ್ ಅವರ ನೇತೃತ್ವದಲ್ಲಿ ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್ ರುದ್ರೇಶ್ ಅವರು ಆರು ತಂಡಗಳಲ್ಲಿ ದಾಳಿ ನಡೆಸಿದ್ದಾರೆ. ದಾಳಿ ವೇಳೆ, ಅನೇಕ ಮಹತ್ವದ ದಾಖಲೆಗಳು ಪತ್ತೆಯಾಗಿವೆ. ಸಂಜೆಯ ತನಕ ದಾಳಿ ಮುಂದುವರೆಯಲಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.


ಮೀನುಗಾರಿಕಾ ಇಲಾಖೆ ಸಹಾಯಕ ನಿರ್ದೇಶಕರ ಮನೆ ಮೇಲೆ ದಾಳಿ (ಬಳ್ಳಾರಿ) : ಇನ್ನು ಮತ್ತೊಂದು ಕಡೆ ಬಳ್ಳಾರಿಯಲ್ಲಿ ಮೀನುಗಾರಿಕಾ ಇಲಾಖೆ ಸಹಾಯಕ ನಿರ್ದೇಶಕರ ಮನೆ ಮತ್ತು ಕಚೇರಿ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬಳ್ಳಾರಿಯ ಕಚೇರಿ ಸಿದ್ಧಾರ್ಥ್ ನಗರದ ಮನೆ ಸೇರಿದಂತೆ ಒಟ್ಟು ನಾಲ್ಕು ಕಡೆ ದಾಳಿ ನಡೆಸಲಾಗಿದೆ. ಹಲವು ಆರೋಪದ ಹಿನ್ನೆಲೆ ಅಧಿಕಾರಿ ವಿರುದ್ಧ ದೂರುಗಳಿ ದ್ದವು. ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪದ ಹಿನ್ನೆಲೆ ಲೋಕಾಯುಕ್ತರು ದಾಳಿ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

ಬೆಳ್ಳಂಬೆಳಿಗ್ಗೆ ಬೆಳಗಾವಿಯಲ್ಲಿ ಲೋಕಾಯುಕ್ತ ದಾಳಿ : ಬೆಳಗಾವಿಯಲ್ಲಿ ಬೆಳ್ಳಂಬೆಳಗ್ಗೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಅಕ್ರಮ ಆಸ್ತಿ ಗಳಿಕೆ ಆರೋಪದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಎಇಇ ನಿವಾಸಗಳ ಮೇಲೆ ಅಧಿಕಾರಿಗಳು ದಾಳಿ ನಡೆಸಿದರು. ಆಂಜನೇಯ ನಗರದಲ್ಲಿನ ಮೂರು ಮನೆಗಳಲ್ಲಿ ದಾಖಲೆಗಳ ಪರಿಶೀಲನೆಯಲ್ಲಿ ತೊಡಗಿದ್ದಾರೆ.

ಅದೇ ರೀತಿ ಹುಕ್ಕೇರಿ, ಅಥಣಿ ತಾಲೂಕಿನಲ್ಲಿರುವ ಅಜೀತ್ ಸಿಂಗ್ ರಜಪೂತ್ ಮನೆಗಳ ಮೇಲೂ ದಾಳಿ ಮಾಡಲಾಗಿದೆ. ದಾಳಿ ವೇಳೆ ಮಹತ್ವದ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ತಿಳಿದು ಬಂದಿದೆ. ಲೋಕಾಯುಕ್ತ ಡಿಎಸ್‌ಪಿ ಬಿ. ಎಸ್. ಪಾಟೀಲ, ಭರತ ರೆಡ್ಡಿ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದ್ದು, ಅಧಿಕಾರಿಗಳಿಂದ ದಾಖಲೆಗಳ ಪರಿಶೀಲನೆ ಮುಂದುವರಿದಿದೆ.

ಮೈಸೂರಿನಲ್ಲಿಯೂ ಲೋಕಾಯುಕ್ತ ದಾಳಿ : ನಗರದ ಲೋಕೋಪಯೋಗಿ ಇಲಾಖೆಯಲ್ಲಿ ಇಂಜಿನಿಯರ್ ಆಗಿ ಕೆಲಸ ಮಾಡುತಿದ್ದ ರೇವಣ್ಣ ಎಂಬುವರ ಮನೆ ಮತ್ತು ಕಚೇರಿ ಮೇಲೆ ಲೋಕಾಯುಕ್ತ ಪೊಲೀಸರು ದಾಳಿ ಮಾಡಿ ಶೋಧ ನಡೆಸುತ್ತಿದ್ದಾರೆ. ಇಂದು ಬೆಳಗ್ಗೆ ಮೈಸೂರು ಲೋಕಾಯುಕ್ತ ಠಾಣೆಯ ಡಿವೈಎಸ್‌ಪಿ ವೆಂಕಟೇಶ್ ನೇತೃತ್ವದಲ್ಲಿ ಮೈಸೂರಿನ ಲೋಕೋಪಯೋಗಿ ಇಲಾಖೆಯಲ್ಲಿ ಇಂಜಿನಿಯರ್ ಆಗಿರುವ ರೇವಣ್ಣ ಅವರ ಮೈಸೂರಿನ ಕಚೇರಿ ಹಾಗೂ ಮಂಡ್ಯದ ಅವರ ಮನೆಯ ಮೇಲೆ ದಾಳಿ ಮಾಡಿದ್ದು, ಎರಡು ಕಡೆ ಪರಿಶೀಲನೆ ನಡೆಸುತ್ತಿದ್ದಾರೆ.

# ದಾವಣಗೆರೆ: ಕಾಂಗ್ರೆಸ್ ರೋಡ್‌ಶೋದಲ್ಲಿ ಪಾಲ್ಗೊಂಡ ಮೊಹಮ್ಮದ್ ಅಜರುದ್ದೀನ್-ಬಹಿರಂಗ ಪ್ರಚಾರಕ್ಕೆ ತೆರೆ



**ದಾವಣಗೆರೆ,ಏ.7-**ಕಾಂಗ್ರೆಸ್, ಬಿಜೆಪಿ ನಡುವೆ ಜಿದ್ದಾಜಿದ್ದಿನ ಹೋರಾಟದ ಕಣವಾಗಿರುವ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ ಬೀಳಲಿದೆ. ಇದಕ್ಕೂ ಮುನ್ನ ಇಂದು ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಪರ ಬೃಹತ್ ಶಕ್ತಿ ಪ್ರದರ್ಶನ ನಡೆಯಿತು.

ಮಾಜಿ ಕ್ರಿಕೆಟಿಗ ಮೊಹಮ್ಮದ್ ಅಜರುದ್ದೀನ್, ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್, ಎಂ.ಸಿ.ಸುಧಾಕರ್, ಶಾಸಕರಾದ ಎನ್.ಎ.ಹ್ಯಾರಿಸ್, ರಿಜ್ವಾನ್ ಅರ್ಷದ್, ಮುಖ್ಯ ಸಚೇತಕ ಸಲೀಂ ಅಹ್ಮದ್, ರಾಜ್ಯಸಭಾ ಸದಸ್ಯ ನಾಸೀರ್ ಹುಸೇನ್ ಸೇರಿದಂತೆ ಹಲವರು ಪಾಲ್ಗೊಂಡು ಮತಯಾಚಿಸಿದರು.

ದುರ್ಗಾಂಬಿಕಾ ದೇವಸ್ಥಾನದಿಂದ ಶುರುವಾದ ರೋಡ್ ಶೋ ಹೊಂಡ ವೃತ್ತ ಸರ್ಕಲ್, ದೊಡ್ಡಪೇಟೆ, ಕಾಯಿಪೇಟೆ, ವಿಠಲ ಮಂದಿರ ಮುಖ್ಯ ರಸ್ತೆ ಮುಖಾಂತರ ಹಳೇ ಬೇತೂರು ರಸ್ತೆ, ಮದೀನಾ ಸರ್ಕಲ್, ಆಜಾದ್ ನಗರ, ಅಹ್ಮದ್ ನಗರ, ಬಾಷಾನಗರ, ಅಖ್ತರ್ ರಜಾ ಸರ್ಕಲ್, ಶಿವನಗರ, ಎಸ್ಎಸ್ಎಂ ನಗರಕ್ಕೆ ಸೇರಿತು. ರೋಡ್ ಶೋದಲ್ಲಿ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಬಾವುಟ ಹಿಡಿದು ಸಾಗಿದರು.್ ಪಂಚ ಗ್ಯಾರಂಟಿಗಳ ಜೊತೆ ಜೊತೆಗೆ ಶಾಮನೂರು ಶಿವಶಂಕರಪ್ಪನವರು ಮಾಡಿದ ಅಭಿವೃದ್ಧಿ ಕೆಲಸಗಳನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ನಾಯಕರು ಕ್ಷೇತ್ರದಲ್ಲಿ ಪತಯಾಚಿಸಿದರು.

ಸಂಸದೆ ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಚುನಾವಣೆಯಲ್ಲಿ ಶಾಮನೂರು ಶಿವಶಂಕರಪ್ಪನವರು ಪಡೆದಿದ್ದ ಲೀಡ್‌ಗಿಂತ ಹೆಚ್ಚು ಲೀಡ್‌ನಲ್ಲಿ ಸಮರ್ಥ್ ಶಾಮನೂರು ಗೆಲ್ಲಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವಾರ್ಡ್ 21 ಬಸಾಪುರದಲ್ಲಿ ಪ್ರಚಾರ ಮಾಡಿದ ಸಮರ್ಥ್ ಶಾಮನೂರು, ನನಗೆ ಜನ ಬೆಂಬಲವಿದೆ. ನನ್ನ ಮೇಲೆ ಸಾಕಷ್ಟು ತಾಯಂದಿರ ಆಶೀರ್ವಾದ ಇದೆ.

ಪುತ್ರನನ್ನು ಗೆಲ್ಲಿಸಲು ನನ್ನ ಮೇಲೆ ನನ್ನ ತಾಯಿಯ ಆಶೀರ್ವಾದ ಇದ್ದೇ ಇದೆ. ಹಾಗಾಗಿ ಗೆಲುವು

ನನ್ನದೇ. ಇನ್ನು ಸಿಎಂ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಸೇರಿದಂತೆ ಎಲ್ಲ ಸಚಿವರು, ಶಾಸಕರು ಕಾರ್ಯಕರ್ತರು ಸಾಕಷ್ಟು ಸಪೋರ್ಟ್ ಮಾಡ್ತಿದ್ದಾರೆ. ಅಲ್ಲದೇ ಬಹಿರಂಗವಾಗಿ ಪ್ರಚಾರ ಮಾಡ್ತಿದ್ದಾರೆ. ಎಲ್ಲರಿಗೂ ಧನ್ಯವಾದ ತಿಳಿಸುತ್ತೇನೆ ಎಂದರು.

ಬಿಜೆಪಿಯಿಂದ ಶ್ರೀನಿವಾಸ ದಾಸ ಕರಿಯಪ್ಪ ಅಭ್ಯರ್ಥಿಯಾಗಿದ್ದಾರೆ. ಕ್ಷೇತ್ರದಲ್ಲಿ ಕಾಂಗ್ರೆಸ್ ಮತ್ತು

ಬಿಜೆಪಿ ಅಭ್ಯರ್ಥಿ ನಡುವೆ ನೇರ ಸ್ಪರ್ಧೆ ಏರ್ಪಟ್ಟಿದ್ದು, ಅಲ್ಪಸಂಖ್ಯಾತರು ಮತ್ತು ಲಿಂಗಾಯತ ಸಮುದಾಯದ ಮತಗಳು ಗೆಲುವಿಗೆ ನಿರ್ಣಾಯಕವಾಗಿವೆ.

# ಗುಂಡೇಟಿಗೆ ಚಿರತೆ ಬಲಿ ಶಂಕೆ

## ತನಿಖೆಗೆ ಸಚಿವ ಈಶ್ವರ್ ಖಂಡ್ರೆ ಆದೇಶ



**ಮೈಸೂರು,ಏ.7-**ಹುಣಸೂರಿನ ಪ್ರಾದೇಶಿಕ ಅರಣ್ಯ ವಿಭಾಗದ ಪಿರಿಯಾಪ ಟ್ಟಣ ತಾಲೂಕಿನ ಗುಳೆದಹಳ್ಳದ ಪ್ರದೇಶದ ಲ್ಲಿ ಸುಮಾರು 2 ವರ್ಷದ ಹೆಣ್ಣು ಚಿರತೆಯ ಶವವೊಂದು ಸೋಮವಾರ ಪತ್ತೆಯಾಗಿದೆ. ಈ ಚಿರತೆಯನ್ನು ಗುಂಡು ಹಾರಿಸಿ ಸಾಯಿಸಿರುವ ಶಂಕೆ ಹಿನ್ನೆಲೆಯಲ್ಲಿ ತನಿಖೆ ನಡೆಸುವಂತೆ ಸಚಿವ ಈಶ್ವರ್ ಖಂಡ್ರೆ ಅವರು ಆದೇಶಿಸಿದ್ದಾರೆ.

ವನ್ಯಜೀವಿ ಬೇಟೆಗೆ ಬಂದಿರುವ ಬೇಟೆಗಾರರು ನಾಡಬಂದೂಕಿನಿಂದ ಗುಂಡು ಹಾರಿಸಿರಬಹುದೆಂದು ಶಂಕಿಸಲಾಗಿದೆ. ಎರಡು ದಿನಗಳ ಹಿಂದೆ ಕೃತ್ಯ ನಡೆದಿದೆ ಎಂದು ತಿಳಿದುಬಂದಿದೆ. ಚಿರತೆಯ ಕಳೇಬರವು ಪತ್ತೆಯಾದ ಜಾಗಕ್ಕೆ ಅರಣ್ಯಾಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಚಿರತೆಯ ಶವ ಪರೀಕ್ಷೆ ವೇಳೆ ನಾಡಬಂದೂಕಿನಿಂದ ಹಾರಿಸಿರುವ ಮೂರು ಕಾಡತೂಸು (ಗುಂಡು)ಗಳು ಪತ್ತೆಯಾಗಿವೆ. ಇದರ ಸಾವಿಗೆ ನಿಖರ ಕಾರಣ ತಿಳಿಯಲು ಚಿರತೆ ಶವದ ಅಂಗಾಂಗಗಳ ಸ್ಯಾಂಪಲ್‌ಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿದ್ದಾರೆ. ವರದಿ ಬಂದ ನಂತರ ಮುಂದಿನ ತನಿಖೆ ನಡೆಸಲಾಗುವುದು ಎಂದು ವಲಯದ ಡಿಸಿಎಫ್ ಕುರುಬನಾಥನ್ ಮಾಹಿತಿ ನೀಡಿದ್ದಾರೆ.

ತನಿಖೆಗೆ ಈಶ್ವರ್ ಖಂಡ್ರೆ ಆದೇಶ : ಹುಣಸೂರು ವಿಭಾಗದ ಪಿರಿಯಾಪಟ್ಟಣ ವ್ಯಾಪ್ತಿಯ ಗುಳೆದಹಳ್ಳದ ರಾಜ್ಯ ಅರಣ್ಯದಿಂದ 2 ಕಿಲೋಮೀಟರ್ ದೂರದಲ್ಲಿರುವ ಕೊಪ್ಪ ವಿಭಾಗದಲ್ಲಿ ಗುಂಡೇಟಿನಿಂದ ಚಿರತೆ ಸಾವಿಗೀಡಾಗಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ.

ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಸೂಚನೆ ನೀಡಿರುವ ಅವರು, ಇಂದು ಬೆಳಗ್ಗೆ ಎರಡು ವರ್ಷ ವಯಸ್ಸಿನ ಹೆಣ್ಣು ಚಿರತೆಯೊಂದು ಗುಂಡೇಟಿನಿಂದ ಮೃತಪಟ್ಟಿರುವುದು ಅತ್ಯಂತ ನೋವಿನ ಸಂಗತಿಯಾಗಿದ್ದು, ವನ್ಯಜೀವಿ ಅಂಗಾಂಗಕ್ಕಾಗಿ ಕಳ್ಳಬೇಟೆ ಇನ್ನೂ ನಡೆಯುತ್ತಿದೆ ಎಂಬುದಕ್ಕೆ ಪುಷ್ಟಿ ನೀಡುತ್ತಿದೆ. ಈ ನಿಟ್ಟಿನಲ್ಲಿ ತನಿಖೆ ನಡೆಸುವಂತೆ ಅವರು ಸೂಚಿಸಿದ್ದಾರೆ. ಮೃತ ಚಿರತೆಯ ಮರಣೋತ್ತರ ಪರೀಕ್ಷೆ ನಡೆಸಿದ ಡಾ. ಆದರ್ಶ್, ಚಿರತೆಯ ದೇಹದೊಳಗೆ ಮೂರು ಗುಂಡುಗಳು ಪತ್ತೆಯಾಗಿವೆ ಎಂದು ವರದಿ ಮಾಡಿರುವ ಹಿನ್ನೆಲೆಯಲ್ಲಿ ಈ ಬಗ್ಗೆ ಸಮಗ್ರ ತನಿಖೆ ನಡೆಸಿ,

ವನ್ಯಜೀವಿ ಕಳ್ಳಬೇಟೆಗಾರರನ್ನು ಪತ್ತೆ ಹಚ್ಚಿ ಕಾನೂನು ರೀತಿಯ ಶಿಕ್ಷೆ ಕೊಡಿಸಲು ಮತ್ತು ಈ ವಲಯದಲ್ಲಿ ಗಸ್ತು ವೈಫಲ್ಯವಾಗಿದ್ದಲ್ಲಿ ಸಂಬಂಧಿತ ಗಸ್ತು ಸಿಬ್ಬಂದಿಯ ಮೇಲೆ ಶಿಸ್ತುಕ್ರಮ ಜರುಗಿಸಲು ಹಾಗೂ ಅರಣ್ಯ ಅಪರಾಧ ನಿಯಂತ್ರಣ ಕೋಶವನ್ನು ಹೆಚ್ಚು ಸಕ್ರಿಯಗೊಳಿಸಲು ಸೂಚನೆ ನೀಡಿದ್ದಾರೆ.

# ಇಂಧನ ಪೂರೈಕೆಯಲ್ಲಿ ರಾಜ್ಯಗಳ ನಡುವೆ ತಾರತಮ್ಯ-ಮುನಿಯಪ್ಪ ಆರೋಪ




**ಬೆಂಗಳೂರು,ಏ.7-**ಕರ್ನಾಟಕ ರಾಜ್ಯದೊಂದಿಗೆ ತಾರತಮ್ಯ ಧೋರಣೆ ಅನುಸರಿಸಲಾಗುತ್ತಿದೆ. ಇಂಧನ ಪೂರೈಕೆಯಲ್ಲಿ ರಾಜ್ಯಗಳ ನಡುವೆ ಸಮಾನತೆ ಕಾಣುತ್ತಿಲ್ಲ ಎಂಬ ಅಂಶವೂ ಗಮನಕ್ಕೆ ಬಂದಿದೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಹೆಚ್.ಮುನಿಯಪ್ಪ ಆರೋಪಿಸಿದ್ದಾರೆ.

ಈ ಸಂಬಂಧ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, ದೇಶದಲ್ಲಿ ಎಲ್‌ಪಿಜಿ ಗ್ಯಾಸ್, ವಾಣಿಜ್ಯ ಗ್ಯಾಸ್ ಸಿಲಿಂಡರ್, ಸಿಎನ್‌ಜಿ, ಪೆಟ್ರೋಲ್ ಹಾಗೂ ಡೀಸೆಲ್ ಪೂರೈಕೆ ಮಾಡುವ ಜವಾಬ್ದಾರಿ ಸಂಪೂರ್ಣವಾಗಿ ಕೇಂದ್ರ ಸರ್ಕಾರದ ಅಧೀನದಲ್ಲಿದೆ. ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಮೂಲಕ ಈ ವ್ಯವಸ್ಥೆ ನಡೆಯುತ್ತದೆ. ರಾಜ್ಯ ಸರ್ಕಾರಕ್ಕೆ ಈ ಪೂರೈಕೆಯನ್ನು ನೇರವಾಗಿ ನಿಯಂತ್ರಿಸುವ ಅಧಿಕಾರವಿಲ್ಲ ಎಂಬುದು ಸಾರ್ವಜನಿಕರು ಗಮನಿಸಬೇಕಾದ ವಿಷಯವಾಗಿದೆ ಎಂದು ತಿಳಿಸಿದ್ದಾರೆ.

ಈ ಮಧ್ಯೆ, ಪಶ್ಚಿಮ ಏಷ್ಯಾ (ಕೊಲ್ಲಿ ರಾಷ್ಟ್ರಗಳು) ಪ್ರದೇಶದಲ್ಲಿ ಉಂಟಾಗಿರುವ ಯುದ್ಧದ ಪರಿಣಾಮವಾಗಿ ಜಾಗತಿಕ ಮಟ್ಟದಲ್ಲಿ ಇಂಧನ ಸರಬರಾ ಜು ವ್ಯತ್ಯಯ ಗೊಂಡಿದೆ. ಅದರ ಪರಿಣಾಮ ದೇಶದೊಳಗೂ ತೀವ್ರವಾಗಿ ಕಾಣಿಸುತ್ತಿದ್ದು, ಕರ್ನಾಟಕದಲ್ಲಿಯೂ ಎಲ್‌ಪಿಜಿ ಗ್ಯಾಸ್ ಹಾಗೂ ಇಂಧನ ಕೊರತೆ ಉಂಟಾಗಿದೆ. ಇದರಿಂದ ಜನರ ದೈನಂದಿನ ಬದುಕು ಸಂಕಷ್ಟಕ್ಕೆ ಸಿಲುಕಿದೆ ಎಂದಿದ್ದಾರೆ. ಸಿಎನ್‌ಜಿ ಕೊರತೆಯಿಂದ ಸಂಕಷ್ಟದಲ್ಲಿರುವ ಆಟೋ ಚಾಲಕರು, ವಾಣಿಜ್ಯ ಗ್ಯಾಸ್ ಕೊರತೆಯಿಂದ ತೊಂದರೆ ಅನುಭವಿಸುತ್ತಿರುವ ಹೋಟೆಲ್ ಮತ್ತು ಆಹಾರ ಉದ್ಯಮಗಳು, ಅಡುಗೆಗೆ ಗ್ಯಾಸ್ ಸಿಗದೇ ಪರದಾಡುತ್ತಿರುವ ಗೃಹಿಣಿಯರು. ಈ ಎಲ್ಲವನ್ನು ಗಮನಿಸಿದಾಗ, ಕೇಂದ್ರ ಸರ್ಕಾರವು ಸಮಯೋಚಿತ ಕ್ರಮಗಳನ್ನು ಕೈಗೊಳ್ಳುವಲ್ಲಿ ವಿಫಲವಾಗಿದೆ ಎಂಬುದು ಸ್ಪಷ್ಟವಾಗುತ್ತದೆ. ವಿದೇಶಾಂಗ ನೀತಿ ಮತ್ತು ಇಂಧನ ನಿರ್ವಹಣೆಯ ನಡುವೆ ಸಮನ್ವಯದ ಕೊರತೆ ಕಾಣಿಸಿಕೊಂಡಿದ್ದು, ಅದರ ಹೊರೆ ಜನರ ಮೇಲೆ ಬಿದ್ದಿದೆ ಎಂದು ಟೀಕಿಸಿದ್ದಾರೆ. ಇದಲ್ಲದೇ, ಇಂಧನ ಪೂರೈಕೆಯಲ್ಲಿ ರಾಜ್ಯಗಳ ನಡುವೆ ಸಮಾನತೆ ಕಾಣುತ್ತಿಲ್ಲ ಎಂಬ ಅಂಶವೂ ಗಮನಕ್ಕೆ ಬಂದಿದೆ. ಕೆಲವು ರಾಜ್ಯಗಳಿಗೆ ಹೆಚ್ಚು ಆದ್ಯತೆ ನೀಡಲಾಗುತ್ತಿರುವಂತಿದೆ. ಕರ್ನಾಟಕ ರಾಜ್ಯದೊಂದಿಗೆ ತಾರತಮ್ಯ ಧೋರಣೆ ಅನುಸರಿಸಲಾಗುತ್ತಿದೆ ಎಂಬ ಆತಂಕವೂ ವ್ಯಕ್ತವಾಗಿದೆ. ಇದರಿಂದ ರಾಜ್ಯದ ಲಕ್ಷಾಂತರ ಜನರು ಅನಗತ್ಯ ಸಂಕಷ್ಟ ಅನುಭವಿಸುವಂತಾಗಿದೆ ಎಂದು ಆರೋಪಿಸಿದ್ದಾರೆ.

ಈ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರವು ತಕ್ಷಣ ಇಂಧನ ಮತ್ತು ಅನಿಲ ಪೂರೈಕೆಯನ್ನು ಹೆಚ್ಚಿಸಲು, ರಾಜ್ಯಗಳ ನಡುವೆ ಸಮಾನ ಹಂಚಿಕೆ ಖಚಿತಪಡಿಸಲು, ಕರ್ನಾಟಕಕ್ಕೆ ಅಗತ್ಯ ಆದ್ಯತೆ ನೀಡಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ರಾಜ್ಯ ಸರ್ಕಾರ ಒತಾಯಿಸುತ್ತದೆ. ರಾಜ್ಯದ ಜನರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು, ಈ ವಿಷಯದ ಕುರಿತು ಮಾನ್ಯ ಮುಖ್ಯಮಂತ್ರಿಗಳು ಕೇಂದ್ರ ಪೆಟ್ರೋಲಿಯಂ ಸಚಿವರಿಗೆ ಪತ್ರ ಬರೆದಿದ್ದಾರೆ ಎಂದಿದ್ದಾರೆ. ಅದೇ ರೀತಿ, ನಾನು ಸಹ ಕೇಂದ್ರ ಪೆಟ್ರೋಲಿಯಂ ಸಚಿವರಿಗೆ ಪತ್ರ ಬರೆದು ವಿಷಯವನ್ನು ಗಂಭೀರವಾಗಿ ಪರಿಗಣಿಸಲು ಮನವಿ ಮಾಡಿದ್ದೇನೆ. ಕೇಂದ್ರ ಸರ್ಕಾರದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸಮಸ್ಯೆ ಪರಿಹಾರಕ್ಕೆ ಅಗತ್ಯವಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

# ಎರಡೂ ಕ್ಷೇತ್ರಗಳ ಉಪ್ಚುನಾವಣೆಯಲ್ಲಿ ನಾವೇ ಗೆಲ್ತೇವೆ-ಡಿಸಿಎಂ ಡಿಕೆಶಿ



**ಹುಬ್ಬಳ್ಳಿ,ಏ.7-**ಎರಡೂ ಕ್ಷೇತ್ರಗಳ ಉಪ್ಚುನಾವಣೆಯಲ್ಲಿ ನಾವೇ ಗೆಲ್ಲುತ್ತೇವ್ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

ನಗರದ ವಿಮಾನ ನಿಲ್ದಾಣದಲ್ಲಿಂದು ಮಾತನಾಡಿದ ಅವರು, ಕೇಂದ್ರ ಸರ್ಕಾರ ಪೆಟ್ರೋಲ್ ಸೇರಿದಂತೆ ಎಲ್‌ಪಿಜಿ ದರ ಹೆಚ್ಚಳ ಮಾಡಿದ್ದು, ಇದರಿಂದಾಗಿ ಜನ ಭ್ರಮನಿರಸನಗೊಂಡಿದ್ದಾರೆ. ಹೀಗಾಗ್ ನಮ್ಮ ಗ್ಯಾರಂಟಿಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಉಪಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳು ಗೆಲ್ಲುವುದು ಖಚಿತ ಎಂದರು.

ಆಟೋ ಚಾಲಕರು ಗ್ಯಾಸ್ ಬಿಟ್ಟು ಪೆಟ್ರೋಲ್ ಬಳಸಿ ಎಂಬ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಹೇಳಿಕೆ ಕುರಿತು ಪ್ರತಿಕ್ರಿಯಿಸಿ, ಇರಾನ್‌ನಿಂದ ಎರಡು ಎಲ್‌ಪಿಜಿ ಹಡಗುಗಳು ಭಾರತಕ್ಕೆ ಬಂದಿರುವುದನ್ನು ಗುಜರಾತ್‌ಗೆ ಏಕೆ ಕಳುಹಿಸಿದರು?. ಮಂಗಳೂರು, ಕೇರಳಕ್ಕೆ ಕಳುಹಿಸುವ ಮೂಲಕ ರಾಜ್ಯದ ಹಿತಕ್ಕೆ ಸಹಾಯ್ ಮಾಡಬಹುದಿತ್ತಲ್ಲ?. ಕೇಂದ್ರ ಉತ್ತರ ಭಾರತವನ್ನು ಮಾತ್ರ ನೋಡುತ್ತಿದೆ. ಅವರು ದಕ್ಷಿಣ ಭಾರತವನ್ನು ನೋಡುತ್ತಿಲ್ಲ ಎಂದು ಟೀಕಿಸಿದರು.

ಯಾರದೋ ಹೇಳಿಕೆಗೆ ಉತ್ತರ ಕೊಡಲ್ಲ: ಅಧಿಕಾರ ಹಸ್ತಾಂತರ ಹಾಗೂ ನಾಯಕತ್ವ ಬದಲಾವಣೆ ವಿಚಾರದಲ್ಲಿ ಬೇರೆಯವರ ಮಾತಿಗೆ ಬೆಲೆ ಇಲ್ಲ. ಏನೇ ಇದ್ದರೂ ನಾನು ಹಾಗೂ ಮುಖ್ಯಮಂತ್ರಿಯವರು ಹೇಳಬೇಕಾಗುತ್ತದೆ. ಯಾರದೋ ಹೇಳಿಕೆಗೆ ಉತ್ತರ ಕೊಡಲ್ಲ ಎಂದು ಸಚಿವ ಜಮೀರ್ ಅಹ್ಮದ್ ಹೇಳಿಕೆಗೆ ಇದೇ ವೇಳೆ ಟಾಂಗ್ ಕೊಟ್ಟರು.

ಮೊಳಗಿದ ಟಿಮುಂದಿನ್ ಸಿಎಂ ಡಿಕೆಟಿ ಘೋಷಣೆ: ಕೇರಳದಿಂದ ವಿಶೇಷ ವಿಮಾನದ ಮೂಲಕ ಹುಬ್ಬಳ್ಳಿಗೆ ಆಗಮಿಸಿದ್ ಡ್ಸಿಎಂ ಡಿ.ಕೆ.ಶಿವಕುಮಾರ್ ಅವರು ಮುಂದಿನ ಮುಖ್ಯಮಂತ್ರಿ ಎಂದು ಕಾಂಗ್ರೆಸ್ ಕಾರ್ಯಕರ್ತರು ಘೋಷಣೆ ಕೂಗಿದರು.

ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಕಳೆದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಂದ ಮತಕ್ಕಿಂತ ಈ ಬಾರಿಯ ಉಪಚುನಾವಣೆಯಲ್ಲಿ ಹೆಚ್ಚು ಮತ ಬೀಳಲಿದ್ದು, ನಮ್ಮ ಅಭ್ಯರ್ಥಿಗಳು ಹೆಚ್ಚು ಮತಗಳ ಅಂತರದಲ್ಲಿ ಗೆಲ್ಲಲಿದ್ದಾರೆ ಎಂದು ಡಿಕೆಶಿ ವಿಶ್ವಾಸ ವ್ಯಕ್ತಪಡಿಸಿದ್ದರು.

ಬೆಂಗಳೂರಿನ ಸದಾಶಿವನಗರ ನಿವಾಸದಲ್ಲಿ ಇತ್ತೀಚಿಗೆ ಮಾತನಾಡಿದ್ದ ಅವರು, ದಾವಣಗೆರೆ ಹಾಗೂ ಬಾಗಲಕೋಟೆಯ ಉಪಚುನಾವಣೆ ಪ್ರಚಾರ ಮಾಡಿ ಬಂದಿದ್ದೇನೆ. ನಮ್ಮ ಕಾರ್ಯಕರ್ತರು ಬಹಳ ಚೆನ್ನಾಗಿ ಕೆಲಸ ಮಾಡುತ್ತಿದ್ದಾರೆ. ಪ್ರತಿ ಮನೆ ಮನೆಗೆ ಹೋಗಿ ಗ್ಯಾರಂಟಿ ಯೋಜನೆಗಳ ಬಗ್ಗೆ ಮನವರಿಕೆ ಮಾಡುತ್ತಿದ್ದಾರೆ.

ಗ್ಯಾರಂಟಿ ಫಲಾನುಭವಿಗಳಲ್ಲಿ ಕಳೆದ ಬಾರಿ ಬಿಜೆಪಿಗೆ ಮತ ಹಾಕಿರುವವರೂ ಕೂಡ ಈ ಬಾರಿ ಕಾಂಗ್ರೆಸ್‌ಗೆ ಮತ ಹಾಕುವುದಾಗಿ ತಿಳಿಸಿದ್ದಾರೆ. ಬೆಲೆ ಏರಿಕೆಯಾಗುತ್ತಿರುವ ಪರಿಸ್ಥಿತಿಯಲ್ಲಿ ಗ್ಯಾರಂಟಿ ಯೋಜನೆ ಎಷ್ಟು ನೆರವಾಗುತ್ತಿವೆ ಎಂದು ಸ್ಮರಿಸುತ್ತಿದ್ದಾರೆ. ಇವುಗಳನ್ನು ಉಳಿಸಿಕೊಳ್ಳಲು ಜನ ತೀರ್ಮಾನಿಸಿದ್ದಾರೆ ಎಂದು ತಿಳಿಸಿದ್ದರು.

# ತಪಾಸಣೆ ನೆಪದಲ್ಲಿ ಮಹಿಳೆಗೆ ಲೈಂಗಿಕ ಕಿರುಕುಳ ನೀಡಿದ ಏರ್‌ಪೋರ್ಟ್ ಸಿಬ್ಬಂದಿಗೆ ಹೈಕೋರ್ಟ್ ಚಾಟಿ

**ಬೆಂಗಳೂರು,ಏ.7-**ವಿಮಾನ ನಿಲ್ದಾಣದಲ್ಲಿ ತಪಾಸಣೆಯ ನೆಪದಲ್ಲಿ ದಕ್ಷಿಣ ಕೊರಿಯಾ ಮಹಿಳೆಯ ಖಾಸಗಿ ಭಾಗಗಳನ್ನು ಸ್ಪರ್ಶಿಸಿ ಲೈಂಗಿಕ ದೌರ್ಜನ್ಯ ಎಸಗಿದ ಉದ್ಯೋಗಿಯೊಬ್ಬನ ಕೃತ್ಯಕ್ಕೆ ಹೈಕೋರ್ಟ್ ಚಾಟಿ ಬೀಸಿದೆ.

ಲೈಂಗಿಕ ದೌರ್ಜನ್ಯ ಅಪರಾಧ ಸಂಬಂಧ ತನ್ನ ವಿರುದ್ಧ ಬಿಐಎಎಲ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್ಐಆರ್ ರದ್ದು ಕೋರಿ ವಿಮಾನ ನಿಲ್ದಾಣದಲ್ಲಿ ಇಮ್ಮಿಗ್ರೇಷನ್ ತಪಾಸಣೆ ವಿಭಾಗದ ಸಿಬ್ಬಂದಿಯಾಗಿರುವ ಬೆಂಗಳೂರು ಉತ್ತರ ತಾಲೂಕಿನ ರಾಮಯ್ಯ ಲೇಔಟ್‌ನ ಥಾಮಸ್ ಟೌನ್ ನಿವಾಸಿ ಮೊಹಮ್ಮದ್ ಆಫಾನ್ ಅಹ್ಮದ್ ಎಂಬಾತ ಅರ್ಜಿ ಸಲ್ಲಿಸಿದ್ದ.

ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಪೀಠ, ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, ಅರ್ಜಿ ವಜಾಗೊಳಿಸಿ ಆದೇಶಿಸಿತು.

ಈತ ಎಂತಹ ಅಧಿಕಾರಿ?: ಮತ್ತೊಂದು ದೇಶದಿಂದ ಬಂದಿರುವ ಮಹಿಳೆಯನ್ನು ತಪಾಸಣೆಯ ನೆಪದಲ್ಲಿ ಪುರುಷರ ಶೌಚಾಲಯಕ್ಕೆ ಕರೆದೊಯ್ದು, ಟಿಟಿ ಮಾದರಿಯಲ್ಲಿ ನಿಲ್ಲಿಸಿ ದೇಹದ ಎಲ್ಲಾ ಭಾಗಗಳನ್ನು ಸ್ಪರ್ಶಿಸಲಾಗಿದೆ.

ಈತ ಎಂತಹ ಅಧಿಕಾರಿ? ಈ ವರ್ತನೆಯನ್ನು ಸಹಿಸಲಾಗದು ಎಂದು ಪೀಠ ಹೇಳಿದೆ.

ಇದಕ್ಕೂ ಮುನ್ನ ವಿಚಾರಣೆ ವೇಳೆ ಆರೋಪಿ ಪರ ವಕೀಲರು, ಅರ್ಜಿದಾರರ ವಿರುದ್ಧ ಲೈಂಗಿಕ ದೌರ್ಜನ್ಯದ ಆರೋಪವಿದೆ ಎಂದು ತಿಳಿಸಿದರು. ಇದಕ್ಕೆ ನ್ಯಾಯಪೀಠ, ಅರ್ಜಿದಾರರು ಏನು ಮಾಡಿದ್ದಾರೆ ಎಂಬುದು ತಿಳಿದಿದೆಯೇ?, ಅರ್ಜಿದಾರ ಇಮ್ಮಿಗ್ರೇಷನ್ ತಪಾಸಣೆ ವಿಭಾಗದಲ್ಲಿ ದಕ್ಷಿಣ ಕೊರಿಯಾ ದೇಶದ ಮಹಿಳೆಯನ್ನು ಪುರುಷರ ಶೌಚಾಲಯಕ್ಕೆ ಕರೆದೊಯ್ದು ಟಿ ಪೊಸಿಷನ್‌ನಲ್ಲಿ ನಿಲ್ಲಿಸಿ ದೇಹದೆಲ್ಲೆಡೆ ಸ್ಪರ್ಶಿಸಿದ್ದಾರೆ. ಮತ್ತೊಂದು ದೇಶದ ಮಹಿಳೆಯೊಂದಿಗೆ ಅಸಭ್ಯವಾಗಿ ವರ್ತಿಸಿರುವುದನ್ನು ಸಹಿಸಿಕೊಳ್ಳಬೇಕೆ?, ಅರ್ಜಿದಾರರು ಏನೆಲ್ಲಾ ಮಾಡಿದ್ದಾರೆ ಎಂಬುದನ್ನು ದೂರುದಾರೆ ವಿವರವಾಗಿ ಹೇಳಿದ್ದಾರೆ ಎಂದು ತಿಳಿಸಿದರು.

ಅಲ್ಲದೆ, ಪುರುಷರ ಶೌಚಾಲಯಕ್ಕೆ ಮಹಿಳೆಯನ್ನು ಏಕೆ ಕರೆದೊಯ್ಯಲಾಗಿತ್ತು? ಎಂಬುದನ್ನು ಮೊದಲು ಹೇಳಿ ಎಂದು ಕೇಳಿದ ಪೀಠ, ಮಹಿಳಾ ಶೌಚಾಲಯದಲ್ಲಿ ಮತ್ತೊಬ್ಬರು ಇದ್ದರು ಎಂಬುದಾಗಿ ಅರ್ಜಿದಾರ ಸಮರ್ಥನೆ ಬೇರೆ ಕೊಟ್ಟಿದ್ದಾರೆ. ಅರ್ಜಿದಾರ ಯಾವ ರೀತಿಯ ಅಧಿಕಾರಿ? ಎಂದು ಚಾಟಿ ಬೀಸಿತು. ನಂತರ ಸರ್ಕಾರಿ ವಕೀಲರನ್ನು ಉದ್ದೇಶಿಸಿ, ಅರ್ಜಿದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಿಲ್ಲವೇ? ಎಂದು ನ್ಯಾಯಪೀಠ ಕೇಳಿತು. ಇದಕ್ಕೆ ಸರ್ಕಾರಿ ವಕೀಲರು, ಅರ್ಜಿದಾರ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದರು ಎಂದು ತಿಳಿಸಿದರು.

ಪ್ರಕರಣದ ಹಿನ್ನೆಲೆ: ದಕ್ಷಿಣ ಕೊರಿಯಾ ಮಹಿಳೆ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೆಲಸ ಮಾಡುತ್ತಿರುವ ಖಾಸಗಿ ಕಂಪನಿಯ ಉದ್ಯೋಗಿ ಮೊಹಮ್ಮದ್ ಅಫಾನ್ ಅಹ್ಮದ್ ಎಂಬಾತನ ವಿರುದ್ಧ 2026ರ ಜ.19ರಂದು ದೂರು ನೀಡಿದ್ದರು.

# ಡಿಜೆ ಹಳ್ಳಿಯಲ್ಲಿ ಅಗ್ನಿ ಅವಘಡ: ಪ್ಲೈವುಡ್ ಅಂಗಡಿ ಸುಟ್ಟು ಭಸ್ಮ, ಆರು ಹಸುಗಳ ದಾರುಣ ಸಾವು



**ಬೆಂಗಳೂರು,ಏ.7**-ಪ್ಲೈವುಡ್ ಅಂಗಡಿಯೊಂದರಲ್ಲಿ ಸೋಮವಾರ ತಡರಾತ್ರಿ ಕಾಣಿಸಿಕೊಂಡ ಬೆಂಕಿಯು ದನಗಳ ಕೊಟ್ಟಿಗೆಗೆ ವ್ಯಾಪಿಸಿದ ಪರಿಣಾಮ ಆರು ಹಸುಗಳು ಸಾವನ್ನಪ್ಪಿರುವ ದಾರುಣ ಘಟನೆ ಡಿ.ಜೆ. ಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಶಾಂಪುರ ರಸ್ತೆಯಲ್ಲಿ ನಡೆದಿದೆ.

ನಿನ್ನೆ ತಡರಾತ್ರಿ 1:30ರ ಸುಮಾರಿಗೆ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ನೋಡ ನೋಡುತ್ತಿದ್ದಂತೆ ಬೆಂಕಿ ಜ್ವಾಲೆ ಹೊತ್ತಿ ಉರಿದಿದೆ. ಅಂಗಡಿ ಪಕ್ಕದಲ್ಲಿರುವ ಹಸುವಿನ ಶೆಡ್‍ಗೆ ಅಗ್ನಿ ಕ್ಷಣಾರ್ಧದಲ್ಲಿ ವ್ಯಾಪಿಸಿದ ಪರಿಣಾಮ ಆರು ಹಸುಗಳು ಬೆಂಕಿಗಾಹುತಿಯಾಗಿವೆ. ಶೆಡ್‍ನಲ್ಲಿದ್ದ ಇತರೆ ಹಸುಗಳು ಗಂಭೀರವಾಗಿ ಗಾಯಗೊಂಡಿದ್ದು,

ಪಶು ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಶಾಂಪುರ ರಸ್ತೆಯ ಮುನೇಶ್ವರ ನಗರದಲ್ಲಿ ಹಲವು ವರ್ಷಗಳಿಂದ ಅಹ್ಮಮದ್ ಎಂಬುವರು ಪ್ಲೈವುಡ್ ಅಂಗಡಿ ಇಟ್ಟುಕೊಂಡಿದ್ದರು. ಎಂದಿನಂತೆ ಕೆಲಸ ಮುಗಿಸಿ ಅಂಗಡಿಗೆ ಬೀಗ ಹಾಕಿ ಮನೆಗೆ ತೆರಳಿದ್ದರು. ನಿನ್ನೆ ತಡರಾತ್ರಿ ಅಂಗಡಿಯಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದ್ದು, ಕ್ಷಣಾರ್ಧದಲ್ಲಿ ಅಂಗಡಿಯಲ್ಲಿದ್ದ ಪ್ಲೈವುಡ್ ಸೇರಿದಂತೆ ಪೀಠೋಪಕರಣಕ್ಕೆ ಬೆಂಕಿ ತಗುಲಿದೆ. ಅಂಗಡಿ ಮುಂದೆ ನಿಂತಿದ್ದ ಟಾಟಾ ಏಸ್ ವಾಹನ ಹಾಗೂ ನಾಲ್ಕು ದ್ವಿಚಕ್ರವಾಹನಗಳಿಗೆ ಬೆಂಕಿ ಕಿಡಿ ವ್ಯಾಪಿಸಿ ಸಂಪೂರ್ಣ ಹಾನಿಯಾಗಿವೆ. ಅಲ್ಲದೆ ಪಕ್ಕದ ಮನೆಯ ಬಾಗಿಲು, ಕಿಟಕಿ, ಟಿವಿ ಸೇರಿದಂತೆ ಇತರೆ ಗೃಹಯೋಪಯೋಗಿ ವಸ್ತುಗಳಿಗೂ ಬೆಂಕಿ ತಗುಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿಂತಲ್ಲೇ ಸಜೀವ ದಹನವಾದ ಮೂಕ ಪ್ರಾಣಿಗಳು: ಅಂಗಡಿಗೆ ತಾಕಿಕೊಂಡಿರುವ ದನದ ಕೊಟ್ಟಿಗೆಗೆ ಬೆಂಕಿಯ ಜ್ವಾಲೆ ವ್ಯಾಪಿಸಿದೆ. ಮೂಕ ಪ್ರಾಣಿಗಳು ಗೋಳಾಡಿದರೂ ಪ್ರಯೋಜವಾಗದೆ ಕೊಟ್ಟಿಗೆಯಲ್ಲಿದ್ದ 20 ಹಸುಗಳ ಪೈಕಿ 6 ಹಸುಗಳು ಸಜೀವ ದಹನವಾಗಿವೆ. ಕೆಲ ಹಸುಗಳಿಗೆ ಗಂಭೀರ ಗಾಯಗಳಾಗಿವೆ.

ಸುಮಾರು 25 ವರ್ಷಗಳಿಂದ ಹಸು ಸಾಕಾಣಿಕೆಯಲ್ಲಿ ತೊಡಗಿಸಿಕೊಂಡು ಹಾಲಿನ ವ್ಯಾಪಾರ ಮಾಡುತ್ತಿದ್ದೆ. ಈ ವ್ಯಾಪಾರವೇ ನಮಗೆ ಜೀವನಾಧಾರವಾಗಿತ್ತು. ಸದ್ಯ ಜೀವನಕ್ಕೆ ಆಧಾರವಾಗಿದ್ದ ಹಸುಗಳ ಈ ಸ್ಥಿತಿ ಕಂಡು ದಿಕ್ಕೇ ತೋಚದಂತಾಗಿದೆ ಎಂದು ಮಾಲೀಕ ಶ್ರೀನಿವಾಸ್ ಬೇಸರ ವ್ಯಕ್ತಪಡಿಸಿದ್ದಾರೆ.

ನೆರೆಹೊರೆಯವರು ನೀಡಿದ ಮಾಹಿತಿ ಮೇರೆಗೆ ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ಸಿಬ್ಬಂದಿ, ಬೆಂಕಿ ನಂದಿಸಿದ್ದಾರೆ. ಆಕಸ್ಮಿಕವಾಗಿ ಬೆಂಕಿ ತಗುಲಿದೆಯಾ ಅಥವಾ ಕಿಡಿಗೇಡಿಗಳು ಬೆಂಕಿ ಇಟ್ಟರಾ ಎಂಬುದರ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದ್ದು, ಸದ್ಯ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಮೈಸೂರಿನಿಂದ 30 ಜನ ಡ್ರಗ್ ಪೆಡ್ಲರ್ಸ್ ಗಡಿಪಾರು ಮಾಡಿದ್ದೇವೆ ನಗರ ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್





**ಮೈಸೂರು,ಏ.7**-ನಗರದಲ್ಲಿ ಮಾದಕ ವಸ್ತುಗಳ ನಿಯಂತ್ರಣಕ್ಕಾಗಿ ಪೊಲೀಸರು ಹಲವಾರು ವಿಶೇಷ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ. ಇದರ ಜೊತೆಗೆ ನಗರವನ್ನು ಡ್ರಗ್ಸ್ ಮುಕ್ತಗೊಳಿಸಲು ವಿಶೇಷ ಕಾರ್ಯಾಚರಣೆ ನಡೆಸಿ, ಸುಮಾರು 30 ಜನ ಪೆಡ್ಲರ್ಸ್‌ಅನ್ನು ಗಡಿಪಾರು ಮಾಡಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್ ಹೇಳಿದರು.

ತಮ್ಮ ಕಚೇರಿಯಲ್ಲಿಂದು ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ಮೈಸೂರು ನಗರದಲ್ಲಿ ಮಾದಕ ವಸ್ತುಗಳ ನಿಯಂತ್ರಣಕ್ಕಾಗಿ ಹಲವು ಕಾರ್ಯಕ್ರಮಗಳನ್ನು ಮಾಡಲಾಗಿದ್ದು, ಇದರ ಜೊತೆಗೆ ಕೆಲ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆಗಳನ್ನು ಸಹ ನಡಸಲಾಗಿದೆ. ಇಲ್ಲಿಯವರೆಗೆ ಸುಮಾರು 30 ಜನ ಪೆಡ್ಲರ್ಸ್‌ಅನ್ನು ಗಡಿಪಾರು ಮಾಡಿದ್ದೇವೆ. ಇದರ ಜೊತೆಗೆ ಎನ್‌ಡಿಪಿಎಸ್ ಕಾಯ್ದೆ ಅಡಿ ಓರ್ವ ಹಳೆಯ ಪೆರ್ಡ್ಲಅನ್ನು ಬಳ್ಳಾರಿ ಜೈಲಿಗೆ ಕಳಿಸಿದ್ದೇವೆ ಎಂದು ಪೊಲೀಸ್ ಕಮಿಷನರ್ ಮಾಹಿತಿ ನೀಡಿದರು.

ನಾವು ಎನ್‌ಡಿಪಿಎಸ್ ಕಾಯ್ದೆ ಅಡಿ ಪ್ರಕರಣ ದಾಖಲಿಸಿದರೂ ಸಹ, ತಪ್ಪಿತಸ್ಥರು ಬೇಲ್ ತೆಗೆದುಕೊಂಡು ಆಚೆ ಬಂದು ಷರತ್ತುಗಳನ್ನು ಉಲ್ಲಂಘನೆ ಮಾಡುತ್ತಾರೆ. ಅಂತವರನ್ನು ಪುನಃ ವಶಕ್ಕೆ ಪಡೆದು ಅವರ ಮೇಲೆ ಕೇಸ್ ಹಾಕುತ್ತೇವೆ. ಅದರಲ್ಲಿ ಮೈಸೂರು ಸಿಟಿಯಲ್ಲಿರುವ ಇರ್ಫಾನ್ ಪಾಷಾ ಎಂಬುವರ ಮೇಲೆ 9 ಕೇಸ್‌ಗಳು ಇದ್ದರೂ ಸಹ ಈತ ಮಾದಕ ದ್ರವ್ಯಗಳನ್ನು ಮಾರಾಟವನ್ನು ಮುಂದುವರೆಸಿದ್ದು, ಈತನಿಂದ 28 ಕೆಜಿ ಗಾಂಜಾ ವಶಪಡಿಸಿಕೊಂಡಿದ್ದೇವೆ. ಈತನ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಣದಲ್ಲಿಡಲು ರೌಡಿ ಶೀಟರ್ ಕೇಸ್ ಹಾಕಿ, ಈತನ ಚಟುವಟಿಕೆಗಳ ಮೇಲೆ ನಿಗಾ ವಹಿಸಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ತಿಳಿಸಿದರು.

ಮೊಬೈಲ್ ಕಳೆದುಹೋದರೆ ಐಎಂಇಐ ನಿಂದ ಬ್ಲಾಕ್ ಮಾಡಿ: ಸಾಮಾನ್ಯವಾಗಿ ಮೊಬೈಲ್ ಕಳೆದು ಹೋದರೆ ಮೊದಲು ಐಎಂಇಐ ನಿಂದ ಬ್ಲಾಕ್ ಮಾಡಿದರೆ ಯಾವುದೇ ಸಿಮ್ ಹಾಕಲು ಸಾಧ್ಯವಿಲ್ಲ. ಅದರಲ್ಲಿ ಇ-ಲಾಸ್ಟ್ ಎಂಬ ಆ್ಯಪ್ ಇದ್ದು, ಅದನ್ನು ಬಳಸಿಕೊಳ್ಳಿ ಮತ್ತು ಸಿಐಆರ್ ಪೋರ್ಟಲ್ ಗೆ ನೋಂದಣಿ ಮಾಡಿಕೊಂಡರೆ ನಿಮ್ಮ ಕಳೆದುಹೋದ ಮೊಬೈಲ್ ಅನ್ನು ಹುಡುಕಲು ಸಹಾಯವಾಗುತ್ತದೆ ಎಂದು ನಗರ ಪೊಲೀಸ್ ಕಮಿಷನರ್ ವಿವರಿಸಿದರು. ಜೊತೆಗೆ ಕಳೆದ 3 ತಿಂಗಳಿನಲ್ಲಿ ಕಳ್ಳತನವಾದ 144 ಮೊಬೈಲ್‌ಗಳನ್ನು ಪತ್ತೆ ಮಾಡಿದ್ದು, ಒಟ್ಟಾರೆ 220 ಮೊಬೈಲ್‌ಗಳನ್ನು ಟ್ರೇಸ್ ಮಾಡಿ 197 ಜನರಿಗೆ ವಾಪಸ್ ಕೊಟ್ಟಿದ್ದೇವೆ. ಆದ್ದರಿಂದ ಸಾರ್ವಜನಿಕರು ಸಿಐಆರ್ ಪೋರ್ಟಲ್ ಗೆ ನೋಂದಣಿ ಮಾಡಿಕೊಳ್ಳಿ ಎಂದು ನಗರ ಪೊಲೀಸ್ ಕಮಿಷನರ್ ಸಲಹೆ ನೀಡಿದರು.

# ಶೀಘ್ರ, ನೈಜ ನ್ಯಾಯಾಧಾನ ಇಂದಿನ ಅತ್ಯಗತ್ಯ: ನ್ಯಾ.ಹಂಚಾಟೆ ಸಂಜೀವಕುಮಾರ ಸಲಹೆ

ಕನ್ನಡ ಮಾತೃ ಭೂಮಿ ವಾರ್ತೆ




**ಕೊಪ್ಪಳ,ಏ.07**-ನಾವು ನಮ್ಮ ಚಿಂತನಾ ಕ್ರಮವನ್ನು ಬದಲಾಯಿಸಿದಲ್ಲಿ, ನೆಲಕ್ಕೆ ಬಿದ್ದ ಕಕ್ಷಿದಾರರಿಗೆ ವಕೀಲರಿಂದ ಶೀಘ್ರ ಮತ್ತು ನೈಜ ನ್ಯಾಯಾಧಾನ ಕೊಡಬಹುದಾಗಿದೆ ಎಂದು ಕರ್ನಾಟಕ ಹೈಕೋರ್ಟಿನ ನ್ಯಾಯಾಧೀಶರಾದ ಗೌರವಾನ್ವಿತ ನ್ಯಾಯ ಮೂರ್ತಿ ಹಂಚಾಟೆ ಸಂಜೀವ್‌ಕುಮಾರ್ ಅವರು ಹೇಳಿದರು.

ಯಲಬುರ್ಗಾ ಪಟ್ಟಣದಲ್ಲಿ ಏಪ್ರೀಲ್ 04ರಂದು ನೂತನ ನ್ಯಾಯಾಲಯ ಸಂಕೀರ್ಣ ಉದ್ಘಾಟನಾ ಸಮಾರಂಭದ ಘನ ಉಪಸ್ಥಿತಿ ವಹಿಸಿ ಅವರು ಮಾತನಾಡಿದರು.

ನ್ಯಾಯ ನೀಡುವಾಗ ವಿಳಂಬಕ್ಕೆ ಅವಕಾಶವಿರಬಾರದು. ನಮ್ಮ ಈಗಿನ ಮನೋಭಾವ ಬದಲಾಗದ ಹೊರತು ಏನನ್ನೂ ಮಾಡಲಾಗದು. ಜನತೆಗೆ ನ್ಯಾಯ ಕೊಡುವಾಗ ನಾವು ಶೀಘ್ರ ಮತ್ತು ವೇಗದ ಕ್ರಮ ಅನುಸರಿಸಬೇಕು ಎಂದು ಸಲಹೆ ಮಾಡಿದರು.

ಈಗ ಇಡೀ ದೇಶದ ಜನತೆ ಹಾಗೂ ಸಮಾಜ ನ್ಯಾಯಾಂಗದತ್ತ ನೋಡುತ್ತಿದೆ. ನ್ಯಾಯಾಂಗವು ಭರವಸೆಯ ಬೆಳಕಾಗಿದೆ. ನ್ಯಾಯಾಲಯಗಳಿಗೆ ಹೋದರೆ ನಮಗೆ ನ್ಯಾಯ ಸಿಗುತ್ತದೆ ಎಂದು ಜನರು ನ್ಯಾಯಾಲಯದ ಮೇಲೆ ನಂಬಿಕೆ ಹೊಂದಿದ್ದಾರೆ.

ಮುಖ್ಯವಾಗಿ ನ್ಯಾಯಾಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವತ್ತ ಸರ್ಕಾರಗಳು ಇನ್ನು ಹೆಚ್ಚಿನ ಗಮನ ಕೊಡಬೇಕು ಎಂದರು.

ನಮ್ಮ ದೇಶದಲ್ಲಿ ನ್ಯಾಯಾಧೀಶರ ಸಂಖ್ಯೆ ಕಡಿಮೆ ಇದೆ. ಒಂದು ನ್ಯಾಯಾಲಯದ ವ್ಯವಸ್ಥೆಯಿಂದ ಕನಿಷ್ಟ 5 ತಲೆಮಾರಿಗೆ ಸಹಾಯವಾಗಬೇಕು. ಒಂದು ನ್ಯಾಯಾಲಯದ ಕಾಲಾವಧಿ ಎಂದರೆ ಅದು ಕನಿಷ್ಟ 200 ದಿಂದ 300 ವರ್ಷ ಇರುತ್ತದೆ ಎಂದು ಎಲ್ಲರೂ ಅರ್ಥೈಸಿಕೊಳ್ಳಬೇಕು. ಈ ದಿಸೆಯಲ್ಲಿ ಈಗಿನ ನ್ಯಾಯಾಲಯಗಳ ಬಲಪಡಿಸುವ ಕಾರ್ಯ ಆಗಬೇಕು.

ರಾಜ್ಯದ ಕೆಲವು ನ್ಯಾಯಾಲಯಗಳಲ್ಲಿ ಅತ್ಯುತ್ತಮವಾದ ಮೂಲಭೂತ ಸೌಕರ್ಯಗಳಿವೆ. ಆದರೆ, ಬಹುತೇಕ ತಾಲೂಕುಗಳಲ್ಲಿನ ನ್ಯಾಯಾಲಯಗಳಲ್ಲಿ ಮೂಲ ಸೌಕರ್ಯಗಳಿಗೆ ಕೊರತೆಯಿದೆ. ಇದರಿಂದಾಗಿ ನ್ಯಾಯದಾನ ಪ್ರಕ್ರಿಯೆ ವಿಳಂಬವಾಗುತ್ತಿದೆ ಎಂದರು.

ಇದು ಹೊಸ ಯುಗ. ನಾವು ಬದಲಾಗಲೇಬೇಕು. ಜನಸಂಖ್ಯೆಗೆ ತಕ್ಕಂತೆ ನ್ಯಾಯಾಧೀಶರ ಸಂಖ್ಯೆ ಹೆಚ್ಚುವುದು ಅಗತ್ಯವಿದೆ ಎಂದರು. ಈ ದಿಶೆಯಲ್ಲಿ ಯೋಚಿಸಿ ನ್ಯಾಯಾಂಗ ವ್ಯವಸ್ಥೆಯನ್ನು ಬಲಪಡಿಸುವ ಮೂಲಕ ಬಲಿಷ್ಟ ರಾಷ್ಟ್ರ ಕಟ್ಟಲು ನಾವೆಲ್ಲರೂ ಚಿಂತನಾಶೀಲರಾಗೋಣ ಎಂದರು.

ಮೂರು ವರ್ಷಗಳ ಹಿಂದೆ ಫೆಬ್ರವರಿ 23 ರಂದು ಈ ನ್ಯಾಯಾಲಯದ ಶಂಕುಸ್ಥಾಪನೆಗೆ ನಾನು ಸಾಕ್ಷಿಯಾಗಿದ್ದೆ. ಈಗ ಕಟ್ಟಡದ ಉದ್ಘಾಟನೆಯಾಗಿದೆ ಎಂದು ನ್ಯಾ.ಹಂಚಾಟೆ ಅವರು ಸಂತಷ ವ್ಯಕ್ತಪಡಿಸಿದರು.

**ವಕೀಲರ ಭವನ ನಿರ್ಮಾಣಕ್ಕೆ ಸಲಹೆ:**

ಯಲಬುರ್ಗಾದಲ್ಲಿ ನೂತನ ನ್ಯಾಯಾಲಯ ಸಂಕೀರ್ಣ ನಿರ್ಮಾಣವಾಗಿದ್ದು, ಜಿಲ್ಲಾ ನ್ಯಾಯಾಂಗಕ್ಕೆ ಹೆಚ್ಚಿನ ಬಲ ಬಂದಂತಾಗಿದೆ ಎಂದ ಹಂಚಾಟೆ ಅವರು, ಯಲಬುರ್ಗಾ ತಾಲೂಕಿನಲ್ಲಿ ವಕೀಲರ ಭವನ ನಿರ್ಮಾಣ ಹಾಗೂ ಸುಸಜ್ಜಿತ ಗ್ರಂಥಾಲಯ ನಿರ್ಮಾಣವಾಗಬೇಕಿದೆ ಎಂದು ಶಾಸಕರಾದ ಬಸವರಾಜ ರಾಯರೆಡ್ಡಿ ಅವರಿಗೆ ಸಲಹೆ ಮಾಡಿದರು.


ಅನ್ನದಾತರಿಗೆ ಜಾಗೃತಿ ಮೂಡಿಸಿ: ತಮ್ಮ ಭಾಷಣದಲ್ಲಿ ರೈತರ ವಿಷಯ ಪ್ರಸ್ತಾಪಿಸಿದ ನ್ಯಾಯಮೂರ್ತಿಗಳು, ಶಾಸಕರಾದ ಬಸವರಾಜ ರಾಯರೆಡ್ಡಿ ಅವರ ಜನಪರ, ರೈತಪರ ಕಾಳಜಿ ಮೆಚ್ಚುವಂತದ್ದಾಗಿದೆ.

ಅವರ ಕಾಳಜಿಯಿಂದಾಗಿ ಯಲಬುರ್ಗಾ ತಾಲೂಕು ವೇಗವಾಗಿ ಬೆಳೆಯುತ್ತಿದೆ. ಈ ಭಾಗದ ರೈತರ ಜೀವನ ಮಟ್ಟ ಸಂಪೂರ್ಣ ಸುಧಾರಿಸುವ ದಿಶೆಯಲ್ಲಿ ಅನ್ನದಾತರಿಗೆ ಕೃಷಿ ಜಾಗೃತಿ ಮೂಡಿಸುವ ಕಾರ್ಯವಾಗಬೇಕು.

ಇಲ್ಲಿನ ಮಣ್ಣು ಮತ್ತು ವಾತಾವರಣ ಉತ್ತಮವಾಗಿದೆ. ತೋಟಗಾರಿಕಾ ಬೆಳೆಗಾರರ ಸಂಖ್ಯೆ ಹೆಚ್ಚುತ್ತಿದೆ. ಆಹಾರ ಸಂಸ್ಕರಣ ಕೇಂದ್ರ, ತೆರೆಯುವುದು ಸೇರಿದಂತೆ ರೈತರಿಗೆ ಹೊಸ ಹೊಸ ಕೌಶಲಗಳನ್ನು ಪರಿಚಯಿಸಬೇಕು ಎಂದು ನ್ಯಾ.ಹಂಚಾಟೆ ಅವರು ಸಲಹೆ ಮಾಡಿದರು.

# ವೃದ್ಧ ಕಾಣೆ: ಪತ್ತೆಗೆ ಮನವಿ

ಕನ್ನಡ ಮಾತೃ ಭೂಮಿ ವಾರ್ತೆ



**ಬಳ್ಳಾರಿ,ಏ.07**-

ಸಿರುಗುಪ್ಪ ತಾಲ್ಲೂಕಿನ ಕೆಕೆ ಹಾಳ್ ಗ್ರಾಮದ ನಿವಾಸಿ ಪರಮೇಶ ಶೆಟ್ಟಿ ಎನ್ನುವ 68 ವರ್ಷದ ವೃದ್ಧ ಮಾ.30 ರಂದು ಮನೆಯಿಂದ ಹೊರ ಹೋಗಿ ಮನೆಗೆ ಬಾರದೇ ಕಾಣೆಯಾಗಿರುವ ಕುರಿತು ಹಚ್ಚೊಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಸಹಾಯಕ ಸಬ್ ಇನ್ಸ್ಪೆಕ್ಟರ್ ಮನವಿ ಮಾಡಿದ್ದಾರೆ.

ವೃದ್ಧನ ಚಹರೆ: ಎತ್ತರ 5 ಅಡಿ, ಕಪ್ಪು ಮೈಬಣ್ಣ, ದುಂಡು ಮುಖ ಹೊಂದಿದ್ದು, ಕಪ್ಪು-ಬಿಳಿ ಕೂದಲು, ಅರ್ಧ ಬೋಳು ತಲೆ ಹೊಂದಿರುತ್ತಾನೆ. ಕನ್ನಡ ಭಾಷೆ ಮಾತನಾಡುತ್ತಾನೆ.

ಕಾಣೆಯಾದ ವೃದ್ಧನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಹಚ್ಚೊಳ್ಳಿ ಪೊಲೀಸ್ ಠಾಣೆಯ ಮೊ.9480803054, ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100 ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮಾತೃಶ್ರೀ ಹೇಮಾವತಿ ಅಮ್ಮನವರ ಹುಟ್ಟು ಹಬ್ಬದ ಅಂಗವಾಗಿ ರೋಗಿಗಳಿಗೆ ಹಣ್ಣು ವಿತರಣೆ



ಕನ್ನಡ ಮಾತೃ ಭೂಮಿ ವಾರ್ತೆ

**ಮಾನ್ವಿ,ಏ.07**- ಪಟ್ಟಣದ ಸರಕಾರಿ ಆಸ್ಪತ್ರೆಯಲ್ಲಿ ಕ್ಷೇತ್ರ ಧರ್ಮಸ್ಥಳ ಟ್ರಸ್ಟ್ ವತಿಯಿಂದ ಧರ್ಮಸ್ಥಳದ ಮಾತೃಶ್ರೀ ಹೇಮಾವತಿ ಅಮ್ಮನವರ ಹುಟ್ಟು ಹಬ್ಬದ ಅಂಗವಾಗಿ ತಾ.ಯೋಜನಾಧಿಕಾರಿಗಳಾದ ಸುನೀತಾ ಪ್ರಭು ರವರು ಆಸ್ಪತ್ರೆಯ ರೋಗಿಗಳಿಗೆ ಹಾಲು, ಹಣ್ಣು ಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಮಾನ್ವಿ ವಲಯದ ಮೇಲ್ವಿಚಾರಕರಾದ ಮೈಲಾರಿ, ಕಚೇರಿ ಸಿಬ್ಬಂದಿಗಳಾದ ಬಸವಲಿಂಗಪ್ಪ , ಜ್ಞಾನವಿಕಾಸ ಸಮನ್ವಯಾಧಿಕಾರಿ ಜ್ಯೋತಿ ಇದ್ದರು.


# ದೇವದುರ್ಗ : ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ತಾತ್ಕಾಲಿಕ ಪಟ್ಟಿ ಪ್ರಕಟ ; ಆಕ್ಷೇಪಣೆಗೆ ಅವಕಾಶ

ಕನ್ನಡ ಮಾತೃ ಭೂಮಿ ವಾರ್ತೆ

**ದೇವದುರ್ಗ,ಏ.07**-ಶಿಶು ಅಭಿವೃದ್ಧಿ ಯೋಜನೆ ದೇವ ದುರ್ಗ ವ್ಯಾಪ್ತಿಯಲ್ಲಿ ಖಾಲಿ ಇದ್ದ ಹುದ್ದೆಗಳನ್ನು ಭರ್ತಿ ಮಾಡಲು ಆನ್ ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. 27 ಅಂಗನವಾಡಿ ಕಾರ್ಯಕರ್ತೆಯರ ಹುದ್ದೆ ಮತ್ತು 76 ಸಹಾಯಕಿಯರ ಖಾಲಿ ಇದ್ದ ಹುದ್ದೆ ಗಳಿಗೆ ಜಿಲ್ಲಾ ಆಯ್ಕೆ ಸಮಿತಿಯು ಅರ್ಹ ಅಭ್ಯರ್ಥಿಗಳನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಿರುವದರಿಂದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಕ್ಷೇಪಣೆಗಳು ಇದ್ದಲ್ಲಿ ಸೂಕ್ತ ದಾಖಲಾತಿಗಳೊಂದಿಗೆ ಆಕ್ಷೇಪಣೆ ಅರ್ಜಿಯನ್ನು ಸೂಕ್ತ ದಾಖಲಾತಿಗಳೊಂದಿಗೆ ದಿನಾಂಕ: 04.04.2026 ರಿಂದ 13.04.2026 ರೊಳಗೆ ಸಮಯ ಬೆಳಿಗ್ಗ 08:00 ಗಂಟೆಯಿಅದ ಮಧ್ಯಾಹ್ನ 01.30ರವರೆಗೆ ಸಲ್ಲಿಸಬಹುದು ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಹೇಶ ನಾಯಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಕ್ಷೇಪಣೆ ಸಲ್ಲಿಸುವವರು ಆಕ್ಷೇಪಣೆ ಅರ್ಜಿಯ ಜೊತೆಗೆ ಯಾವುದೇ ದಾಖಲಾತಿಗಳು ಸಲ್ಲಿಸದಿದ್ದಲ್ಲಿ ಅಂಥವರ ಆಕ್ಷೇಪಣೆ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ, ಹಾಗೂ ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಡಾ. ಅರಷಿಣಿಗಿ ಬಿಲ್ಡಿಂಗ್ ನಗರಗುಂಡ ರೋಡ್, ದೇವದುರ್ಗ ಇಲ್ಲಿ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಗರ್ಭಿಣಿಯರು ಪೌಷ್ಟಿಕ ಆಹಾರ,ಒಳ್ಳೆಯ ನಿದ್ದೆ ಮಾಡಿ ಎಂದು ಆರೋಗ್ಯ ಜಾಗೃತಿಗೆ ಕರೆ ನೀಡಿದ ಡಾ. ಚಂದನ

ಕನ್ನಡ ಮಾತೃ ಭೂಮಿ ವಾರ್ತೆ




**ಬಳ್ಳಾರಿ,ಏ.07**-ವಿಶ್ವ ಆರೋಗ್ಯ ದಿನದ ಅಂಗವಾಗಿ ಏಫ್.ಪಿ.ಎ.ಐ ಬಳ್ಳಾರಿ ಶಾಖೆಯ ವತಿ ಯಿಂದ ಗರ್ಭಿಣಿಯರಿಗಾಗಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಟಿ.ಜಿ. ವಿಠ್ಠಲ್ ವಹಿಸಿದ್ದರು.

ಏಫ್.ಪಿ.ಎ.ಐ ಅಧ್ಯಕ್ಷರಾದ ಟಿ.ಜಿ. ವಿಠ್ಠಲ್ ಅವರು ತಮ್ಮ ಅಧ್ಯಕ್ಷೀಯ ನುಡಿಗಳಲ್ಲಿ ಲಿಂಗತಾರತಮ್ಯ ಮಾಡದೆ ಸಮಬಾಳ್ವೆ ನಡೆಸುವ ಅಗತ್ಯವಿದೆ ಎಂದು ಹೇಳಿದರು.

ಏಫ್.ಪಿ.ಎ.ಐ ಉಪಾಧ್ಯಕ್ಷರಾದ ಡಾ. ಚಂದನ ಅವರು ಸಂಪನ್ಮೂಲ ವ್ಯಕ್ತಿಯಾಗಿ ಗರ್ಭಿಣಿಯರ ಆರೈಕೆ ಕುರಿತು ಮಾಹಿತಿ ನೀಡಿ, ನಿಯಮಿತ ತಪಾಸಣೆ, ಸ್ಕ್ಯಾನಿಂಗ್, ರಕ್ತ ಪರೀಕ್ಷೆ ಹಾಗೂ ಥೈರಾಯ್ಡ್ ಪರೀಕ್ಷೆಯ ಮಹತ್ವವನ್ನು ವಿವರಿಸಿದರು. ಪೌಷ್ಟಿಕ ಆಹಾರ, ಸಮರ್ಪಕ ನಿದ್ರೆ ಮತ್ತು ವಿಶ್ರಾಂತಿ ಗರ್ಭಿಣಿಯರ ಆರೋಗ್ಯಕ್ಕೆ ಅತ್ಯಂತ ಅಗತ್ಯವೆಂದು ತಿಳಿಸಿದರು. ಜೊತೆಗೆ ಟಿಟಿ ಲಸಿಕೆ ಕಡ್ಡಾಯವಾಗಿ ಪಡೆಯುವುದು ಹಾಗೂ 23 ವರ್ಷಗಳ ಮಕ್ಕಳ ನಡುವಿನ ಅಂತರ ಕಾಪಾಡಿಕೊಳ್ಳುವ ಅಗತ್ಯವಿದೆ ಎಂದು ಹೇಳಿದರು.ಎಸ್. ವಿಜಯಲಕ್ಷ್ಮಿ ಶಾಖಾ ವ್ಯವಸ್ಥಾ ಪಕರು ಏಫ್.ಪಿ.ಎ.ಐ ಅವರು ತಮ್ಮ ಪ್ರಸ್ತಾವಿಕ ನುಡಿಗಳಲ್ಲಿ ವಿಶ್ವ ಆರೋಗ್ಯ ದಿನದ ಮಹತ್ವವನ್ನು ತಿಳಿಸಿದರು.

# ಡಾ. ಗಂಗಾಂಬಿಕಾ ಅಕ್ಕನವರ 59ನೇ ಜನ್ಮದಿನಾಚರಣೆ

ಕನ್ನಡ ಮಾತೃ ಭೂಮಿ ವಾರ್ತೆ



**ಬೀದರ,ಏ.07**-ನಗರದ ಬಸವಗಿರಿಯಲ್ಲಿ ಶಿವನಗರ ಬಡಾವಣೆಯ ಹಿರಿಯ ಮುಖಂಡರು ಸೇರಿ ಶನಿವಾರ ಬೆಳಿಗ್ಗೆ ಡಾ. ಗಂಗಾಂ ಬಿಕಾ ಅಕ್ಕನವರ 59ನೇ ಹುಟ್ಟುಹ ಬ್ಬವನ್ನು ಸರಳ ಹಾಗೂ ಅರ್ಥಪೂರ್ಣ ವಾಗಿ ಆಚರಿಸಿದರು.

ಮುಖಂಡರು ಗಂಗಾಬಿಕಾ ಅಕ್ಕನವರಿಗೆ ಶಾಲು ಹೊದಿಸಿ, ಹಣ್ಣು ನೀಡಿ ಗೌರವಿಸಿ ಹುಟ್ಟುಹಬ್ಬದ ಶುಭಾಶಯ ಕೋರಿದರು.

ನಂತರ ಅಕ್ಕನವರ ಸಮಾಜಮುಖಿ ಸೇವೆಯನ್ನು ಸ್ಮರಿಸಿದ ಮುಖಂಡರು. ಗಂಗಾಂಬಿಕಾ ಅಕ್ಕ ಅವರು ಬಸವಗಿರಿ ಪ್ರದೇಶದ ಗಣ್ಯ ಸಮಾಜಸೇವಕಿಯಾಗಿ ಪರಿಚಿತರಾಗಿದ್ದು, ಹಲವು ವರ್ಷಗಳಿಂದ ಸಾಮಾಜಿಕ, ಧಾರ್ಮಿಕ ಹಾಗೂ ಸಮುದಾಯದ ಅಭಿವೃದ್ಧಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಜನಮನಗಳಲ್ಲಿ ವಿಶಿಷ್ಟ ಸ್ಥಾನ ಗಳಿಸಿದ್ದಾರೆ.

ಅವರು ವಿಶೇಷವಾಗಿ ಮಹಿಳೆಯರ ಸಬಲೀಕರಣ, ಬಡವರಿಗೆ ನೆರವು, ಧಾರ್ಮಿಕ ಕಾರ್ಯಕ್ರಮಗಳ ಆಯೋಜನೆ ಹಾಗೂ ಯುವಕರಿಗೆ ಮಾರ್ಗದರ್ಶನ ನೀಡುವಲ್ಲಿ ತೊಡಗಿಸಿಕೊಂಡಿದ್ದಾರೆ. ಸರಳತೆ, ಸೇವಾ ಮನೋಭಾವ ಮತ್ತು ನಾಯಕತ್ವ ಗುಣಗಳಿಂದ ಅವರು ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಸಮಾಜದಲ್ಲಿ ಏಕತೆ ಮತ್ತು ಸಹಕಾರವನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಡಾ. ಸುಭಾಷ್ ಕಪುರ್ರ, ಹಿರಿಯ ಸಂಪಾದಕರಾದ ಅಶೋಕ್ ಕುಮಾರ್ ಕರಂಜಿ, ಶಿವ ರಾಜ್ ಮಾಡಿಗೆ,

ಪಂಡಿತ್ ಶಂಭು, ಸತೀಶ್ ಮಂಟಾಳೆ, ವಸುದೇವ್ ಸುಲ್ಲೇಗಾವ್ಕರ್, ಆನಂದ್ ಕುಮಾರ್, ಘಬ್ಬ, ಮಲ್ಲಿಕಾರ್ಜುನ್ ಚೆಲುವ, ಭರ್ ಶೆಟ್ಟಿ, ಅಶೋಕ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಉತ್ತನೂರು: ಉತ್ತರೇಶ್ವರ ಸ್ವಾಮಿ ಜಾತ್ರಾ ರಥೋತ್ಸವ ಅದ್ದೂರಿ

ಕನ್ನಡ ಮಾತೃ ಭೂಮಿ ವಾರ್ತೆ



**ಸಿರುಗುಪ್ಪ,ಏ.07**- ತಾಲೂಕು ಉತ್ತನೂರು ಗ್ರಾಮದಲ್ಲಿ ಶ್ರೀ ಉತ್ತರೇಶ್ವರ ಸ್ವಾಮಿ ಜಾತ್ರಾ ರಥೋತ್ಸವ ಸಂಭ್ರಮದಿಂದ ನೆರವೇರಿತು ದೇವಸ್ಥಾನದಲ್ಲಿ ವಿಶೇಷ ಧಾರ್ಮಿಕ ವಿಧಿ ವಿಧಾನಗಳು ಜರುಗಿದವು ಸ್ವಾಮಿಗೆ ಪಂಚಾಮೃತ ಅಭಿಷೇಕ ವಿಶೇಷ ಅಲಂಕಾರ ಮಹಾಮಂಗಳಾರತಿ ನೆರವೇರಿತು. ಉತ್ತನೂರು ಗ್ರಾಮಸ್ಥರು ಸುತ್ತಮುತ್ತ ಹಳ್ಳಿಗಳ ಭಕ್ತರು ಮುಂಜಾನೆಯಿಂದಲೇ ದೇವಸ್ಥಾನಕ್ಕೆ ಆಗಮಿಸಿ ಉತ್ತರೇಶ್ವರ ಸ್ವಾಮಿಯ ದರ್ಶನ ಪಡೆದರು ಸಂಜೆ ನಿಗದಿತ ಶುಭ ಮುಹೂರ್ತದಲ್ಲಿ ಜಾತ್ರಾ ಮಹಾ ರಥೋತ್ಸವಕ್ಕೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ಭಕ್ತರು ಭಕ್ತಿಯ ಜಯ ಘೋಷಗಳೊಂದಿಗೆ ತೇರನ್ನು ಎಳೆದರು. ರಥ ಸಾಗುವ ಮಾರ್ಗದ ಉದ್ದಕ್ಕೂ ಭಕ್ತರು ಬಾಳೆಹಣ್ಣು ಉತ್ತುತ್ತಿ ಹೂ ಎಸೆಯುವ ಮೂಲಕ ತಮ್ಮ ಹರಕೆ ತೀರಿಸಿದರು ಮಂಗಳ ವಾದ್ಯ ಭಜನಾ ಹಾಡುಗಳ ಗಮನ ಸೆಳೆಯಿತು ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

## ...ಮೊದಲನೇ ಪುಟದಿಂದ

### ಕೇಂದ್ರ ಸಚಿವ ಪ್ರಲ್ಹಾದ ಜೋಷಿ ಹೇಳಿಕೆ ಖಂಡನಿಯ-ಉಸ್ತಾದ

ಕೇಳಿಬಂದಿದೆ. ತೈಲ ಕಂಪನಿಗಳನ್ನು ನಿಯಂತ್ರಿಸಿ ದೇಶದ ಜನತೆಗೆ ಪೆಟ್ರೋಲ್, ಡೀಸೆಲ್ ಹಾಗೂ ಗ್ಯಾಸ್ ಸಮರ್ಪಕವಾಗಿ ಪೂರೈಸುವುದು ಕೇಂದ್ರ ಸರ್ಕಾರದ ಪ್ರಮುಖ ಕರ್ತವ್ಯವಾಗಿದ್ದು, ಯುದ್ಧದ ನೆಪ ಹೇಳಿ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಲಾಗಿದೆ. ಈಗಾಗಲೇ ಗ್ಯಾಸ್ ಬೆಲೆ ಏರಿಕೆಯಿಂದ ಜನರು ಸಂಕಷ್ಟಕ್ಕೆ ಸಿಲುಕಿರುವ ಸಂದರ್ಭದಲ್ಲಿ, ಪೂರೈಕೆಯಲ್ಲಿಯೂ ಕೊರತೆ ಉಂಟಾಗುತ್ತಿ ರುವುದು ಆತಂಕಕ್ಕೆ ಕಾರಣವಾಗಿದೆ. ಬಡ ಆಟೋ ಚಾಲಕರಿಗೆ ಇದು ಮತ್ತಷ್ಟು ಸಂಕಷ್ಟವನ್ನುಂಟು ಮಾಡಿದ್ದು, ಅವರ ಜೀವನೋಪಾಯದ ಮೇಲೆ ಪರಿಣಾಮ ಬೀರಿದೆ. ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಆಡಳಿತ ವೈಫಲ್ಯ ಮತ್ತು ಬಡವರ ಬಗ್ಗೆ ಇರುವ ಉದಾಸೀನತೆ ಸ್ಪಷ್ಟವಾಗಿದೆ ಎಂದು ದೂರಲಾಗಿದ್ದು, ಸಚಿವ ಪ್ರಲ್ಹಾದ ಜೋಷಿ ಅವರು ಆಟೋ ಚಾಲಕರಲ್ಲಿ ಕ್ಷಮೆ ಕೋರಬೇಕು ಹಾಗೂ ಗ್ಯಾಸ್ ಸರಬರಾಜು ಕುರಿತು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

### ಆಟೋಗಳಿಗೆ ಗ್ಯಾಸ್ ದರ ಏರಿಕೆ ಖಂಡಿಸಿ ಆಟೋ ಚಾಲಕರ ಪ್ರತಿಭಟನೆ

ಫಿಲ್ಲಿಂಗ್ ಸ್ಟೇಷನ್ ಮಾಲೀಕರ ಹಾಗೂ ಕಂಪನಿ ಅಧಿಕಾರಿಗಳ ಸಭೆ ಕರೆದು ದರ ಏರಿಕೆಗೆ ಸಂಬಂಧಿಸಿದಂತೆ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಇಲ್ಲವಾದಲ್ಲಿ ಮುಂದಿನ ದಿನಗಲ್ಲಿ ಡಿಸಿ ಕಚೇರಿ ಮುತ್ತಿಗೆ ಹಾಕಲು ಆಟೋ ಚಾಲಕರು ಒಂದಾಗಬೇಕಾಗುತ್ತದೆ ಎಂದು ಎಚ್ಚರಿಸಿದರು.

ಇದೇ ವೇಳೆ ಆಟೋ ಚಾಲಕ ಭಾಷಾ ಮಾತನಾಡಿ, ಆಟೋಗಳಿಗೆ ಬಳಸುವ ಗ್ಯಾಸ್ ದರವನ್ನು ಲೀಟರ್ ಗೆ 120 ರೂ.ಗೆ ಏರಿಸಿರುವುದರಿಂದ ತೀವ್ರ ಸಮಸ್ಯೆ ಉಂಟಾಗಿದೆ, ಹಿಂದಿನಿಂದ ಒಂದು ಲೀಟರ್ ಗ್ಯಾಸ್ 89 ರೂ.ದಿಂದ 91ರೂ.ಗೆ ಲಭ್ಯವಾಗುತ್ತಿದ್ದು, ಇದೀಗ ದರ ಏರಿಕೆಯಿಂದ ಚಾಲಕರಿಗೆ ಆರ್ಥಿಕ ಭಾರ ಹೆಚ್ಚಾಗಿದೆ. ದರ ಹೆಚ್ಚಳದಿಂದಾಗಿ ಅನೇಕ ಚಾಲಕರು ಗ್ಯಾಸ್ ಹಾಕಿಸಿಕೊಳ್ಳಲು ಹಿಂಜರಿಯುತ್ತಿದ್ದಾರೆ. ಇದರಿಂದ ದಿನನಿತ್ಯದ ಜೀವನ ನಡೆಸುವುದು ಕಷ್ಟವಾಗುತ್ತಿದೆ. ಸರ್ಕಾರ ತಕ್ಷಣ ಗ್ಯಾಸ್ ದರವನ್ನು ಇಳಿಸಿ, ಆಟೋ ಚಾಲಕರ ಸಮಸ್ಯೆಗಳಿಗೆ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಆಟೋ ಚಾಲಕರ ಸಂಘದ ಜಿಲಾನಿ ಮಾತನಾಡಿ, ಆಟೋಗಳಿಗೆ ಬಳಸುವ ಗ್ಯಾಸ್ ದರವನ್ನು 120 ರೂ.ಗೆ ಏರಿಸಿರುವ ಹಿನ್ನೆಲೆಯಲ್ಲಿ ಆಟೋ ಚಾಲಕರು ತೀವ್ರ ತೊಂದರೆ ಅನುಭವಿಸುತ್ತಿದ್ದು, ಸಂಬಂಧಿಸಿದ ಅಧಿಕಾರಿಗಳು ಈ ಸಮಸ್ಯೆಯತ್ತ ಗಮನ ಹರಿಸುತ್ತಿಲ್ಲ.ಗ್ಯಾಸ್ ದರ ಏರಿಕೆಯಿಂದ ಜೀವನ ನಡೆಸುವುದು ಕಷ್ಟವಾಗುತ್ತಿದೆ.

ತಿಂಗಳಿಗೆ ಆಟೋ ಕಂತು ಕಟ್ಟಬೇಕಿರುವುದರ ಜೊತೆಗೆ, ಮನೆ ನಡೆಸುವುದು ಕಷ್ಟಕರವಾಗಿದೆ. ಆರ್ಥಿಕ ಸಂಕಷ್ಟ ಹೆಚ್ಚಾಗಿದೆ.

ಗ್ಯಾಸ್ ಸಮಸ್ಯೆ ಬಗ್ಗೆ ಅಧಿಕಾರಿಗಳಿಗೆ ತಿಳಿದಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ ಅವರು, ತಕ್ಷಣ ಗ್ಯಾಸ್ ದರವನ್ನು ಇಳಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಇಲ್ಲವಾದರೆ ಡಿಸಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಕೆ ನೀಡಿದರು.

### ಬಸವ ಕಲ್ಯಾಣದ ಕೆರೆಯಲ್ಲಿ ಹಡಪದ ಅಪ್ಪಣ್ಣ ಪುತ್ಥಳಿ ಸ್ಥಾಪನೆಗೆ ಆಗ್ರಹಿಸಿ ಮನವಿ

ಕಮಿಟಿ ಯವರು ಅಕ್ರಮವಾಗಿ ಹಸ್ತಕ್ಷೇಪ ಮಾಡಿ ಅನ್ಯ ಶರಣರ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಿರುವುದು ಖೇದನೀಯ ಸಂಗತಿ, ಇದರಿಂದ ಶಿವಶರಣ ಹಡಪದ ಅಪ್ಪಣ್ಣನವರಿಗೆ ಅಲ್ಲದೇ ನಮ್ಮ ಸಮುದಾಯದ ಭಕ್ತಿಭಾವನೆಗಳಿಗೆ ತೀವು ನೋವುಂಟಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಪ್ಪಣ್ಣನವರ ಅರಿವಿನ ಗುಹೆ ಮುಂದೆ ಹಾಕಿದ್ದ ನಾಮ ಫಲಕವನ್ನು ಸಹ ಕೆಲವರು ರಾತ್ರೋರಾತ್ರಿ ಕಿತ್ತಿ ಹಾಕಿದ್ದಾರೆ. ಈ ಕೃತ್ಯದಲ್ಲಿ ಭಾಗಿಯಾದ ಪಂಚಕಮೀಟಿ ಮತ್ತು ಸಂಬಂಧ ಪಟ್ಟ ಅಧಿಕಾರಗಳ ವಿರುದ್ಧ ತಕ್ಷಣ ಕ್ರಮ ಕೈಗೊಂಡು ಯಥಾಸ್ಥಿತಿಗೆ ತರಬೇಕು. ಹಾಗೆಯೇ ಹಡಪದ ಅಪ್ಪಣ್ಣನವ ಅರಿವಿನ ಗವಿಯಲ್ಲಿ ಅವರ ಮೂರ್ತಿಯನ್ನೇ ಪ್ರತಿಷ್ಠಾಪನೆ ಮಾಡಿ, ಆ ಸ್ಥಳವನ್ನು ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿಸಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಅಧ್ಯಕ್ಷ ಬಸವರಾಜ, ಗೌರವಾಧ್ಯಕ್ಷ ಬಸವಂತರಾಯ ನವಲಕಲ್, ಅಮರಪ್ಪ ಅಮೀನ ನಗರ, ಧನಂಜಯ, ದೇವೇಂದ್ರಪ್ಪ, ರಾಚಪ್ಪ ಮರ್ಚೆಡ್, ಚನ್ನವೀರಪ್ಪ, ಕರೆಪ್ಪ ಗಬ್ಬೂರು, ಮುತ್ತಣ್ಣ ಅತ್ತನೂರು ಸೇರಿದಂತೆ ಅನೇಕರು ಇದ್ದರು.

### ಬಾಲಕಾರ್ಮಿಕತೆ ತಡೆಯಲು ಎಲ್ಲಾಇಲಾಖೆ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ-ಎಡಿಸಿ ಶಿವಾನಂದ ಭಜಂತ್ರಿ

ಸೂಕ್ತ ದಂಡ ಸೇರಿದಂತೆ ಕ್ರಮ ಕೈಗೊಳ್ಳಬೇಕು ಮತ್ತು ಮುಂದೆಯೂ 14ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳದಂತೆ ಜಾಗೃತಿ ಮೂಡಿಸಬೇಕು ಎಂದರು. ಜಿಲ್ಲೆಯಲ್ಲಿ ಬಾಲಕಾರ್ಮಿಕ ಕಿಶೋರ ಕಾರ್ಮಿಕರನ್ನು ರಕ್ಷಿಸಲು ವಿಶೇಷ ತಂಡವನ್ನು ರಚಿಸಬೇಕು. ಆಯಾ ತಾಲೂಕಿನ ಅಥವಾ ಆಯಾ ವ್ಯಾಪ್ತಿಯ ಪೊಲೀಸ್ ಠಾಣೆಯ ಸಹಕಾರದೊಂದಿಗೆ ದಾಳಿ ನಡೆಸಬೇಕು. ಗ್ರಾಮೀಣ ಭಾಗದಲ್ಲಿ ವಾಹನಗಳಲ್ಲಿ ಮಕ್ಕಳನ್ನು ಕೃಷಿ ಕೆಲಸಗಳಿಗೆ ಕರೆದೋಯ್ಯುತ್ತಾರೆ. ಅಂತಹ ವಾಹನಗಳನ್ನು ತಡೆದು, ವಾಹನ ಮಾಲಿಕ, ವಾಹನ ಚಾಲಕ ಹಾಗೂ ಕೃಷಿ ಚಟುವಟಿಕೆಗ ಮಕ್ಕಳನ್ನು ಬಳಸಿಕೊಂಡವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದರು.

ಬಾಲಕಾರ್ಮಿಕತೆ ತಡೆಗಟ್ಟಲು ಪ್ರತಿ ತಿಂಗಳವಾರು ಒಂದು ಇಲಾಖೆಗೆ ಜವಾಬ್ದಾರಿ ನೀಡಿ, ಬಾಲಕಾರ್ಮಿಕ ಪದ್ಧತಿ ತಡೆಗಟ್ಟಲು ಕಾಯ್ದೆಯ ಕಲಂ 17ರಡಿ ನೇಮಕಗೊಂಡ ಅಧಿಕಾರಿಗಳು, ನಿರೀಕ್ಷಕರು ಹಾಗೂ ಅವರ ಇಲಾಖೆಗಳಿಗೆ ವರ್ಷದಲ್ಲಿ ಒಂದು ತಿಂಗಳು ಒಂದು ಇಲಾಖೆಯಂತೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ಗುರುತಿಸಿ ಪುನರ್‌ವಸತಿ ಕಲ್ಪಿಸಿ, ಮಕ್ಕಳನ್ನು ನೇಮಿಸಿಕೊಂಡ ತಪ್ಪಿತಸ್ಥರ ವಿರುದ್ಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಿಸಬೇಕು ಎಂದರು.

2013-14ನೇ ಸಾಲಿನಿಂದ ಈವರೆಗೆ ವಾಹನಗಳನ್ನು ತಪಾಸಣೆ ಕೈಗೊಂಡು 2537 ಮಕ್ಕಳನ್ನು ಕೆಲಸಕ್ಕೆ ಹೋಗುವುದನ್ನು ತಡೆದು ರಕ್ಷಣೆ ಮಾಡಲಾಗಿದೆ. ದಾಳಿ ಮತ್ತು ತಪಾಸಣೆ ಕಾರ್ಯ ನಿರಂತರವಾಗಿ ನಡೆಯುತ್ತಿದ್ದು, ಮುಂದೆ ಹೆಚ್ಚಿನ ತಪಾಸಣೆಗಳನ್ನು ನಡೆಸಿ, ಬಾಲಕಾರ್ಮಿಕತೆಗೆ ಒಳಗಾದ ಮಕ್ಕಳನ್ನು ರಕ್ಷಿಸಲಾಗುವುದು ಎಂದು ಇಲಾಖೆಯ ಅಧಿಕಾರಿಗಳು ಸಭೆಗೆ ತಿಳಿಸಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ 18ವರ್ಷದೊಳಗಿನ ಯಾವುದೇ ಹೆಣ್ಣು ಮಕ್ಕಳಿಗೆ ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳಿಗೆ ಮದುವೆಯಾದಲ್ಲಿ ಅದನ್ನು ಬಾಲ್ಯ ವಿವಾಹ ಎಂದು ಪರಿಗಣಿಸಲಾಗಿದೆ. ಕಾಯ್ದೆಯ ಪ್ರಕಾರ ಬಾಲ್ಯ ವಿವಾಹ ಆದಲ್ಲಿ ಹುಡುಗ, ಹುಡುಗಿಯ ತಂದೆ ತಾಯಿ ಅಲ್ಲದೇ ಸಂಬಂಧಟ್ಟ ಎಲ್ಲರ ವಿರುದ್ಧ ತಪ್ಪಿತಸ್ಥರಿಗೆ ಕಾರಾಗೃಹವಾಸ ಹಾಗೂ ದಂಡ ವಿಧಿಸುವ ಅವಕಾಶವಿದ್ದು, ಕಾಯ್ದೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡಲು ಎಲ್ಲಾ ಇಲಾಖೆಗಳ ಸಹಕಾರ ಹಾಗೂ ಸಮನ್ವಯದ ಅಗತ್ಯವಿದೆ. ಆದ್ದರಿಂದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆಯಡಿ ಅಧಿಸೂಚಿಸಲ್ಪಟ್ಟ ಹನ್ನೊಂದು ಇಲಾಖೆಗಳ ಅಧಿಕಾರಿಗಳು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ತಪಾಸಣೆ ಅಥವಾ ಹಠಾತ್ ದಾಳಿ ಕೈಗೊಳ್ಳುವ ಸಂದರ್ಭಗಳಲ್ಲಿ ತಂಡದೊಂದಿಗೆ ಸಕ್ರಿಯವಾಗಿ ಭಾಗವಹಿಸಿ ಮಕ್ಕಳ ರಕ್ಷಣೆ ಹಾಗೂ ಪುನರ್‌ವಸತಿಗಾಗಿ ಕ್ರಮ ಕೈಗೊಂಡು ಈ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡ ಮಾಲೀಕರ ವಿರುದ್ಧ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ ಹಾಗೂ ತಿದ್ದುಪಡಿ ಕಾಯ್ದೆಯಡಿ ಪ್ರಕರಣ ದಾಖಲಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಕಾರ್ಮಿಕ ಇಲಾಖೆ ಅಧಿಕಾರಿಗಳು ನಿಯಮಿತವಾಗಿ ತಪಾಸಣೆ ನಡೆಸಿ ಬಾಲ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿ ಕಲ್ಪಿಸಬೇಕು. ಗ್ಯಾರೇಜ್, ಕಾರ್ಖಾನೆ, ಹೋಟೆಲ್, ಅಂಗಡಿ, ಮತ್ತಿತರ ಅಪಾಯಕಾರಿ ಉದ್ಯೋಗದ ಸ್ಥಳಗಳಲ್ಲಿ ತಪಾಸಣೆ ಹೆಚ್ಚಿಸಬೇಕು. ತಪಾಸಣೆ ತೀವ್ರವಾದರೆ ಬಾಲ ಕಾರ್ಮಿಕರನ್ನು ಕೆಲಸದಲ್ಲಿ ತೊಡಗಿಸಿಕೊಳ್ಳಲು ಉದ್ಯೋಗದಾತರು ಹೆದರುತ್ತಾರೆ. ಪತ್ತೆ ಹಚ್ಚಿದ ಬಾಲ ಕಾರ್ಮಿಕರಿಗೆ ಪುನರ್ವಸತಿ ಕಲ್ಪಿಸಿ ಮುಖ್ಯವಾಹಿನಿಗೆ ತಂದರೆ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಬಾಲ ಕಾರ್ಮಿಕರ ನಿಷೇಧ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದರೆ ಮಕ್ಕಳು ಬಾಲ ಕಾರ್ಮಿಕರಾಗುವುದನ್ನು ತಪ್ಪಿಸಬಹುದು. ಇಲ್ಲವಾದರೆ ಮಕ್ಕಳು ಕೊನೆಯವರೆಗೂ ಕಾರ್ಮಿಕರಾಗಿಯೇ ಉಳಿದುಬಿಡುತ್ತಾರೆ ಎಂದರು. ಬಾಲಕಾರ್ಮಿಕತೆ ಅಥವಾ ಬಿಡುಗಡೆಗೊಳಿಸಿದ ಮಕ್ಕಳ ಕುಟುಂಬಗಳಿಗೆ ಸಾಮಾಜಿಕ ಭದ್ರತೆ ಯೋಜನೆಯ ಸೌಲಭ್ಯಗಳನ್ನು ಒದಗಿಸುವ ಮುಖಾಂತರ ಈ ಮಕ್ಕಳ ಕುಟುಂಬಗಳನ್ನು ಆರ್ಥಿಕವಾಗಿ ಸದೃಡರನ್ನಾಗಿಸಲು ವಿವಿಧ ಸೌಲಭ್ಯಗಳನ್ನು ಒದಗಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಇಲಾಖೆಯಿಂದ ಸೂಕ್ತ ನಿರ್ದೇಶನಗಳನ್ನು ನೀಡಬೇಕು ಅಪರ ಜಿಲ್ಲಾಧಿಕಾರಿ ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಕುಮಾರಸ್ವಾಮಿ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರಬಾಬು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನಿತಾ, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಪುಷ್ಪ, ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುನಾಥ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತದ್ದರು.

# ಕ್ಷೇತ್ರ ವಿಂಗಡಣೆಯಿಂದ ದಕ್ಷಿಣ ಭಾರತ ರಾಜ್ಯಗಳಿಗೆ ಆರ್ಥಿಕ ನಷ್ಟ

## ಉಪಚುನಾವಣೆ 2 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು; ಡಿ.ಕೆ ಸುರೇಶ್

**ಬೆಂಗಳೂರು,ಏ.7-** ಲೋಕಸಭಾ, ವಿಧಾನಸಭಾ ಕ್ಷೇತ್ರಗಳ ಮರು ವಿಂಗಣೆಯಿಂದ ದಕ್ಷಿಣ ಭಾರತದ ರಾಜ್ಯಗಳಲ್ಲಿ ಕ್ಷೇತ್ರಗಳು ಕಡಿಮೆಯಾಗುವುದರ ಜೊತೆಗೆ ಆರ್ಥಿಕ ಮುಗ್ಗಟನ್ನು ಎದುರಿಸಬೇಕಾಗುತ್ತದೆ. ನಮ್ಮ ತೆರಿಗೆಗಳು ಉತ್ತರದ ರಾಜ್ಯಗಳಿಗೆ ಹಂಚಿಕೆಯಾಗಲಿದೆ ಎಂದು ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್ ಅವರು ಹೇಳಿದರು.

ಸದಾಶಿವನಗರದ ನಿವಾಸದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಸುರೇಶ್ ಅವರು ಮಂಗಳವಾರ ಪ್ರತಿಕ್ರಿಯಿಸಿದರು. ಲೋಕಸಭಾ, ವಿಧಾನಸಭಾ ಕ್ಷೇತ್ರ ಮರುವಿಂಗಡಣೆಯಿಂದ ಕ್ಷೇತ್ರಗಳು ನಷ್ಟವಾಗುವುದಿಲ್ಲ ಎನ್ನುವ ಪ್ರಧಾನಿಯವರ ಹೇಳಿಕೆಯ ಬಗ್ಗೆ ಕೇಳಿದಾಗ, ನಾನು ಈ ಬಗ್ಗೆ ಹಿಂದೆಯೇ ಹೇಳಿದ್ದೆ. ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯವಾಗಲಿದೆ. ದಕ್ಷಿಣದ ರಾಜ್ಯಗಳು ಎಚ್ಚೆತ್ತುಕೊಳ್ಳಬೇಕು. ಒಂದಲ್ಲ ಒಂದು ದಿನ ಈ ಕೂಗು ಎದ್ದೇಳಲಿದೆ ಎಂದಿದ್ದೆ. ಇಲ್ಲದಿದ್ದರೇ ಜನರು ಪರ್ಯಾಯವಾಗ ಮಾರ್ಗಗಳನ್ನು ಆಲೋಚನೆ ಮಾಡುತ್ತಾರೆ ಎಂದು ಹೇಳಿದ್ದೆ. ಎಷ್ಟು ಸೀಟು ಹೋಗಲಿದೆ ಬರಲಿದೆ ಎನ್ನುವುದು ಮುಖ್ಯವಲ್ಲ ಎಂದರು.

ಇದೇ 16 ನೇ ತಾರೀಕಿನಿಂದ ವಿಶೇಷ ಲೋಕಸಭಾ ಅಧಿವೇಶನ ಕರೆಯಲಾಗಿದೆ. ಸರ್ಕಾರ ಯಾವ ರೀತಿಯಲ್ಲಿ ಬಿಲ್ ಮಂಡಿಸಲಿದೆ ಎಂದು ನೋಡಬೇಕಿದೆ. ಒಟ್ಟಾರೆ ದಕ್ಷಿಣದ ಹಣವನ್ನು ಉತ್ತರದ ರಾಜ್ಯಗಳಿಗೆ ತಗೆದುಕೊಂಡು ಹೋಗುವಂತಹ ಹುನ್ನಾರ ಇದಾಗಿದೆ ಎಂದು ಹೇಳಿದರು.

2011 ರ ಜನಗಣತಿಯ ಅನ್ವಯ ನಾವು ವಿಂಗಡಣೆ ಮಾಡುತ್ತಿದ್ದೇವೆ ಎಂದು ಕೇಂದ್ರ ಸರ್ಕಾರ ಹೇಳುತ್ತಿದೆ. ಇದು ಇನ್ನು ಮಾರಕ. 2011 ರ ಜನಗಣತಿ ಪ್ರಕಾರ ಬೆಂಗಳೂರಿನ ಜನಸಂಖ್ಯೆ 60-70 ಲಕ್ಷ. ಈಗ 1.40 ಕೋಟಿ ಜನಸಂಖ್ಯೆಯಿದೆ. ಕರ್ನಾಟಕದ ಜನಸಂಖ್ಯೆ 5 ಕೋಟಿಯಿತ್ತು ಈಗ ಏಳು ಕೋಟಿಗೂ ಮೀರಿ ಜನಸಂಖ್ಯೆ ಬೆಳೆಯುತ್ತಿದೆ. ಇದರ ಜೊತೆಗೆ ಆರ್ಥಿಕ ಸವಾಲು ಸೇರಿದಂತೆ ಅನೇಕ ಸವಾಲುಗಳು ಎದುರಾಗುತ್ತವೆ. ಎಲ್ಲಾ ಪಕ್ಷಗಳು ಇದರ ಬಗ್ಗೆ ಚಿಂತನೆ ಮಾಡಬೇಕು ಎಂದು ತಿಳಿಸಿದರು.

ಯುದ್ಧದಿಂದ ಸಾಕಷ್ಟು ಸಮಸ್ಯೆಗಳನ್ನು ನಮ್ಮ ದೇಶ ಎದುರಿಸುತ್ತಿದೆ. ಇದರ ಬಗ್ಗೆ ಕೇಂದ್ರ ಸರ್ಕಾರ ತನ್ನ ಮೌನವನ್ನು ಮುರಿದಿಲ್ಲ. ಭಾರತದ ನಾಗರಿಕರಿಗೆ ಪ್ರಧಾನಿಯವರು ಬೇರೆ ಸಂದರ್ಭದಲ್ಲಿ ಸಂದೇಶ ನೀಡುತ್ತಾರೆ. ಆದರೆ ಇವತ್ತಿನ ತನಕ ಪ್ರಧಾನಿ ಸೇರಿದಂತೆ ಯಾವ ಕೇಂದ್ರ ಸಚಿವರು ಸಹ ದೇಶದ ಜನರು ಪರಿಸ್ಥಿತಿ ಹೇಗೆ ಎದುರಿಸಬೇಕು ಎಂದು ಸಂದೇಶ ನೀಡಿಲ್ಲ. ಭಾರತದ ನಾಗರಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ನೇರ ಹೊಣೆಗಾರಿಕೆ ಪ್ರಧಾನಿಯವರೇ ಹೊರಬೇಕು. ಯಾವ ವಿಚಾರದಲ್ಲಿ ಸಮಸ್ಯೆಯಿದೆ. ಮುಂದಿನ ಆರು ತಿಂಗಳು ಹೇಗೆ ಇವುಗಳನ್ನು ಎದುರಿಸಬೇಕು. ಇದಕ್ಕೆ ಯಾವ ಕ್ರಮಗಳನ್ನು ಅನುಸರಿಸಬೇಕು ಎನ್ನುವ ಸಂದೇಶ ನೀಡಬೇಕು ಎಂದರು.

ದೇಶದಲ್ಲಿ ಎಲ್ಲವೂ ಸರಿಯಿದೆ ಎಂದು ಮೂರನೇ ವ್ಯಕ್ತಿ ಹೇಳುವಂತಹದ್ದು, ಮಾಧ್ಯಮಗಳಲ್ಲಿ ಇದನ್ನು ಬಿತ್ತರಿಸುತ್ತಿರುವುದು ನೋಡಿದರೆ ಯಾವುದೂ ಸಹ ಸರಿಯಿಲ್ಲ ಎನ್ನುವ ಅನುಮಾನ ಉಂಟಾಗಲಿದೆ. ಬೆಲೆ ಏರಿಕೆಯಾಗಿದೆ, ಅಭಾವಗಳು ಉಂಟಾಗಿದೆ. ಈ ರೀತಿ ಆದಾಗ ಇದು ಕೃತಕವಾಗಿ ಸೃಷ್ಟಿಯಾಗಿರುವುದೇ ಅಥವಾ ಬೇರೆಯೇ ಎನ್ನುವ ಬಗ್ಗೆ ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಬೇಕು. ಎಚ್ಚರಿಕೆಯ ನಡೆ, ನುಡಿಯನ್ನ ಸರ್ಕಾರ ನೀಡಬೇಕು ಎಂದು ಒತ್ತಾಯ ಮಾಡುತ್ತೇನೆ ಎಂದರು.

ಮುಂದಿನ ಎರಡು ವರ್ಷ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಲಿದ್ದಾರೆ ಎನ್ನುವ ಪರಮೇಶ್ವರ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಇದರ ಬಗ್ಗೆ ಅವರನ್ನೇ ಕೇಳಬೇಕು. ಗೃಹಸಚಿವರು ಅಧಿಕೃತವಾಗಿ ಹೇಳಿದ್ದಾರೆ. ಅವರು ಹೇಗೆ ಹೇಳುತ್ತಾರೋ ಹಾಗೆ ಕೇಳಬೇಕು ಎಂದರು. ಅಣ್ಣನನ್ನು ಒಮ್ಮೆ ಸಿಎಂ ಮಾಡಬೇಕು ಎನ್ನುವ ನಿಮ್ಮ ಆಸೆಯ ಬಗ್ಗೆ ಕೇಳಿದಾಗ, ಅದರ ಬಗ್ಗೆ ಆನಂತರ ಮಾತನಾಡೋಣ. ನಾನೇನೂ ಆಸೆಯಿಲ್ಲ ಎಂದು ಹೇಳಿಲ್ಲವಲ್ಲ. ಇಂದೇ ಸಿಎಂ ಆಗುತ್ತಾರೆ ಎಂದು ಹೇಳಿರುವೆನೆ. ಆಸೆಯಿದೆ ಎಂದು ಹೇಳಿರುವೆ ಎಂದರು. ಈ ಅವಧಿಯಲ್ಲಿ ನಿಮ್ಮ ಅಣ್ಣ ಸಿಎಂ ಆಗುವುದಿಲ್ಲವೇ ಎಂದು ಕೇಳಿದಾಗ, ಆನಂತರ ಮಾತನಾಡೋಣ ಎಂದರು.

ಎರಡು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಗೆಲ್ಲಲಿದೆ. ಗ್ಯಾರಂಟಿಗಳನ್ನು ನೀಡಿದ್ದೇವೆ. ಆ ಭಾಗದ ಅಭಿವೃದ್ಧಿ ವಿಚಾರದಲ್ಲಿ ನಮ್ಮ ಸರ್ಕಾರ ಸಾಕಷ್ಟು ಸ್ಪಂದಿಸಿದೆ. ಹೀಗಾಗಿ ಯಾವುದೇ ಸಮಸ್ಯೆ ಎದುರಾಗುವುದಿಲ್ಲ ಎಂದರು. ಬಾಗಲಕೋಟೆಯಲ್ಲಿ ಸೋಲಾಗಲಿದೆ ಎನ್ನುವ ಬಗ್ಗೆ ಕೇಳಿದಾಗ, ಇದೆಲ್ಲಾ ಊಹಾಪೋಹ. ನಾವು ಅತ್ಯಧಿಕ ಮತಗಳಿಂದ ಗೆಲ್ಲಲಿದ್ದೇವೆ ಎಂದರು.

## ಬಾಕಿ ವೇತನಕ್ಕಾಗಿ ಪ್ರತಿಭಟನೆ: ಚಿತ್ರದುರ್ಗದಿಂದ ಬೆಂಗಳೂರಿಗೆ ಕೆಎಸ್‌ಆರ್‌ಟಿಸಿ ಸಿಬ್ಬಂದಿ ಪಾದಯಾತ್ರೆ

**ಬೆಂಗಳೂರು,ಏ.7-** ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆಯನ್ನು ತೀವ್ರಗೊಳಿಸಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (ಓಖ್ಖಖಇ) ಸಿಬ್ಬಂದಿ ನಾಳೆ ಚಿತ್ರದುರ್ಗದಿಂದ ಬೆಂಗಳೂರಿಗೆ ಪಾದಯಾತ್ರೆ ಆರಂಭಿಸಲಿದ್ದಾರೆ.



ಜನವರಿ 1, 2024 ರಿಂದ 7 ನೇ ವೇತನ ಆಯೋಗದ ಮಾದರಿಯಲ್ಲಿ ಸರ್ಕಾರಿ ನೌಕರರಿಗೆ ಸಮಾನವಾದ ವೇತನವನ್ನು ಜಾರಿಗೊಳಿಸುವುದು, 38 ತಿಂಗಳ ಬಾಕಿ ವೇತನ ಪಾವತಿ ಮತ್ತು ಕಾರ್ಮಿಕ ಸಂಘಟನೆಗಳ ಮಾನ್ಯತೆಗಾಗಿ ತಕ್ಷಣವೇ ಯೂನಿಯನ್ ಚುನಾವಣೆ ನಡೆಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ.

ಕಳೆದ ಮೂರು ವರ್ಷಗಳಿಂದ ರಾಜ್ಯ ಸರ್ಕಾರ ಪದೇ ಪದೇ ಭರವಸೆ ನೀಡಿದ್ದರೂ ದೀರ್ಘಾವಧಿಯ ವಿಳಂಬದ ಕಾರಣ ಹಂತ ಹಂತವಾಗಿ ವೇತನ ಪಾವತಿಯನ್ನು ತಿರಸ್ಕರಿಸಿದ್ದಾರೆ.

ಬುಧವಾರ ಚಿತ್ರದುರ್ಗದಿಂದ ಪ್ರತಿಭಟನೆ ಆರಂಭವಾಗಲಿದ್ದು, ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗೆ ಮನವಿ ಪತ್ರ ಸಲ್ಲಿಸಿ ಬೆಂಗಳೂರಿಗೆ ಪಾದಯಾತ್ರೆ ನಡೆಸಲಿದ್ದಾರೆ. ಮಾರ್ಚ್ 21 ರಂದು ಫ್ರೀಡಂ ಪಾರ್ಕ್‌ನಲ್ಲಿ ಸಮಾವೇಶಗೊಳ್ಳಲು ನಿರ್ಧರಿಸಲಾಗಿದ್ದು, ಅಲ್ಲಿ ಒಕ್ಕೂಟಗಳು ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹವನ್ನು ನಡೆಸಲು ಯೋಜಿಸಿವೆ. ನಾಲ್ಕು ನಿಗಮಗಳಿಂದ ಸುಮಾರು 1.15 ಲಕ್ಷ ಉದ್ಯೋಗಿಗಳನ್ನು ಈ ಯೂನಿಯನ್ ಪ್ರತಿನಿಧಿಸಲಿದ್ದು, ಒಟ್ಟಾರೆಯಾಗಿ ಪ್ರತಿದಿನ ಒಂದು ಕೋಟಿ ಪ್ರಯಾಣಿಕರಿಗೆ ಸೇವೆ ಸಲ್ಲಿಸುತ್ತದೆ.

ಸುದ್ದಿಗಾರರೊಂದಿಗೆ ಮಾತನಾಡಿದ ಕೆಎಸ್ ಆರ್ ಟಿಸಿ ಎಂಪ್ಲಾಯೀಸ್ ಲೀಗ್ ರಾಜ್ಯಾಧ್ಯಕ್ಷ ಆರ್. ಚಂದ್ರಶೇಖರ್, ಕಳೆದ ಮೂರು ವರ್ಷಗಳಿಂದ ಸರ್ಕಾರ ಹಲವು ಬಾರಿ ಸಭೆ ನಡೆಸಿದ್ದರೂ ತಮ್ಮ ಬೇಡಿಕೆ ಈಡೇರಿಸುವ ನಿಟ್ಟಿನಲ್ಲಿ ಯಾವುದೇ ಸೂಕ್ತ ಕ್ರಮ ಕೈಗೊಂಡಿಲ್ಲ. ರಾಜ್ಯ ಸರ್ಕಾರ ಇಲ್ಲಿಯವರೆಗೂ ನಮ್ಮ ಬೇಡಿಕೆ ಈಡೇರಿಸುವ ಬದಲು ಕೇವಲ ಮಾತುಕತೆಯಲ್ಲಿ ನಿರತವಾಗಿದೆ. ಸೋಮವಾರ ಎಲ್ಲಾ ನಾಲ್ಕು ನಿಗಮಗಳ ವ್ಯವಸ್ಥಾಪಕರು ನಡೆಸಿದ ಸಭೆಯಲ್ಲಿ ಶೇ.5 ರಷ್ಟು ಈಅ ಹೆಚ್ಚಿಸುವ ಆಫರ್ ನೀಡಿದ್ದಾರೆ ಎಂದು ತಿಳಿಸಿದರು.

ಖಘೆಐಉ ಯೊಂದಿಗೆ ಮಾತನಾಡಿದ ಓಖ ಖಇ ಸ್ಟಾಫ್ ಮತ್ತು ವರ್ಕರ್ಸ್ ಫೆಡರೇಶನ್‌ನ ಪ್ರಧಾನ ಕಾರ್ಯದರ್ಶಿ ವಿಜಯ್ ಭಾಸ್ಕರ್, ನೌಕರರ ಬಡ್ತಿ ಮತ್ತು ವರ್ಗಾವಣೆಯ ಮೇಲೆ ಪರಿಣಾಮ ಬೀರುತ್ತಿರುವ ಸುಮಾರು 32,000 ರಿಂದ 33,000 ಬಾಕಿ ಇರುವ ಶಿಸ್ತಿನ ಪ್ರಕರಣಗಳನ್ನು ಪರಿಹರಿಸಲು ಆಡಳಿತವು ಭರವಸೆ ನೀಡಿರುವುದು ಸಭೆಯ ಪ್ರಮುಖ ಅಂಶವಾಗಿದೆ. ವೃತ್ತಿ ಪ್ರಗತಿಗೆ ಅನುಕೂಲವಾಗುವಂತೆ ಈ ಪ್ರಕರಣಗಳನ್ನು ಪರಿಶೀಲಿಸಲಾಗುವುದು ಎಂದು ಅಧಿಕಾರಿಗಳು ಸೂಚಿಸಿದ್ದಾರೆ. ಏಪ್ರಿಲ್ 17 ರಂದು ನಡೆಯಲಿರುವ ಮುಂದಿನ ಸಭೆಯಲ್ಲಿ ಈ ವಿಷಯದ ಬಗ್ಗೆ ಚರ್ಚೆ ಮುಂದುವರಿಯುತ್ತದೆ ಎಂದು ಅವರು ಹೇಳಿದರು.

## ಜಯಮೃತ್ಯುಂಜಯ ಶ್ರೀ ವಿರುದ್ಧ ಲೈಂಗಿಕ ಕಿರುಕುಳ ಆರೋಪ: ಅವರು ಸ್ವಾಮೀಜಿಗಳಾಗಿ ಉಳಿದಿಲ್ಲ; ಕಾಶಪ್ಪನವರ್ ಕಿಡಿ

**ಬಾಗಲಕೋಟೆ,ಏ.7-** ಕೂಡಲಸಂಗಮದ ಪಂಚಮಸಾಲಿ ಪೀಠದ ಬಸವ ಜಯಮೃತ್ಯುಂಜಯ ಸ್ವಾಮೀಜಿ ವಿರುದ್ಧ ಮಹಿಳೆಯೊಬ್ಬರು ಲೈಂಗಿಕ ಕಿರುಕುಳ ಆರೋಪ ಮಾಡಿದ್ದು, ಈ ಸಂಬಂಧ ರಾಜ್ಯ ಮಹಿಳಾ ಆಯೋಗಕ್ಕೆ ದೂರು ನೀಡಿದ್ದಾರೆ.

ಪಂಚಮಸಾಲಿ ಸಮುದಾಯಕ್ಕೆ 2ಅ ಮೀಸಲಾತಿ ಹೋರಾಟದ ನೇತೃತ್ವವಹಿಸಿಕೊಂಡಿದ್ದ




ಜಯಮೃತ್ಯುಂಜಯ ಸ್ವಾಮೀಜಿ ವಿರುದ್ಧ ಬೆಂಗಳೂರಿನ ಮಹಿಳೆ ದೂರು ನೀಡಿದ್ದು, ಸ್ವತಃ ಸ್ವಾಮೀಜಿ ನನ್ನ ಖಾಸಗಿ ವಿಡಿಯೋ ಮಾಡಿ ಲೈಂಗಿಕವಾಗಿ ಸಹಕರಿಸುವಂತೆ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಇನ್ನು ಸ್ವಾಮೀಜಿ ವಿರುದ್ಧ ಲೈಂಗಿಕ ಕಿರುಕುಳ ಆರೋಪಕ್ಕೆ ಪ್ರತಿಕ್ರಿಯಿಸಿದ ಕಾಂಗ್ರೆಸ್ ಶಾಸಕ ವಿಜಯಾನಂದ ಕಾಶಪ್ಪನರ್ವ, ಬೆಂಕಿಯಿಲ್ಲದೇ ಹೊಗೆಯಾಡುವುದಿಲ್ಲ. ಸ್ವಾಮೀಜಿಗಳು ಚಾರಿತ್ರ್ಯವಂತರಾಗಿದ್ದರೇ ಯಾಕೆ ಸ್ಟೇ ತರುತ್ತಿದ್ದರು ಎಂದು ಕಿಡಿ ಕಾರಿದ್ದಾರೆ.

ಬಸವ ಜಯಮೃತ್ಯುಂಜಯ ಶ್ರೀ ಈಗ ಸ್ವಾಮೀಜಿಗಳಾಗಿ ಉಳಿದಿಲ್ಲ. ನಡೆ-ನುಡಿಗಳಲ್ಲಿ ಅವರು ಸ್ವಾಮೀಜಿಗಳಾಗಿಲ್ಲ ಇಂಥಹ ಕಾರಣಕ್ಕೆ ಅವರನ್ನು ಪೀಠದಿಂದ ಉಚ್ಚಾಟನೆ ಮಾಡಲಾಗಿತ್ತು ಎಂದು ಕಾಶಪ್ಪನವರ್ ಹೇಳಿದ್ದಾರೆ.

ಬದಲಾಗಲಿ ಎಂದು ಸ್ವಾಮೀಜಿಗಳಿಗೆ ನೋಟಿಸ್ ಕೂಡ ನೀಡಿದ್ದೆವು. ಆದರೆ ನೋಟಿಸ್ ನೀಡಿದರೂ ಬದಲಾಗದ ಹಿನ್ನೆಲೆಯಲ್ಲಿ ಅವರನ್ನು ಉಚ್ಚಾಟನೆ ಮಾಡಲಾಯಿತು. ಕಾಲ ಎಲ್ಲದಕ್ಕೂ ಉತ್ತರ ನೀಡುತ್ತಿದೆ ಎಂದು ಕಾಶಪ್ಪನವರ್ ತಿಳಿಸಿದ್ದಾರೆ.

## ಯೂರಿಯಾ ಖರೀದಿಸಲು ರೈತರಿಗೆ ಗುರುತಿನ ಚೀಟಿ ಕಡ್ಡಾಯ: ಕೃಷಿ ಇಲಾಖೆ

**ಶಿವಮೊಗ್ಗ,ಏ.7-** ಯೂರಿಯಾ ರಸಗೊಬ್ಬರ ಖರೀದಿಸಲು ರೈತರು ಇನ್ನು ಮುಂದೆ ರೈತ ಗುರುತಿನ ಚೀಟಿ ಹೊಂದಿರಬೇಕು ಎಂದು ಕೃಷಿ ಜಂಟಿ ನಿರ್ದೇಶಕ ಕಿರಣ್ ಕುಮಾರ್ ತಿಳಿಸಿದ್ದಾರೆ.

ಹೊಸ ನಿಯಮವು 2026-27 ಖಾರಿಫ್ ಋತುವಿನಿಂದ ಜಾರಿಗೆ ಬರುತ್ತದೆ. ರಸಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ತರುವ ಮತ್ತು ಕಪ್ಪು ಮಾರುಕಟ್ಟೆ ಮಾರಾಟವನ್ನು ತಡೆಯುವ ಗುರಿಯನ್ನು ಈ ಕ್ರಮ ಹೊಂದಿದೆ ಎಂದು ಕುಮಾರ್ ಹೇಳಿದರು.ಈ ವ್ಯವಸ್ಥೆಯಡಿಯಲ್ಲಿ, ಪ್ರತಿಯೊಬ್ಬ ರೈತರ ಭೂ ಹಿಡುವಳಿ ಗಾತ್ರ ಮತ್ತು ಬೆಳೆಯ ಆಧಾರದ ಮೇಲೆ ಕೆ-ಕಿಸಾನ್ ಸಾಫ್ಟ್‌ವೇರ್ ಮೂಲಕ ರಸಗೊಬ್ಬರವನ್ನು ವಿತರಿಸಲಾಗುವುದು. ಅಗತ್ಯವಿರುವ ಪ್ರಮಾಣವನ್ನು ಮಾತ್ರ ಹಂಚಿಕೆ ಮಾಡಲಾಗಿದೆ ಎಂದು ಖಚಿತಪಡಿಸಿಕೊಳ್ಳಲಾಗುತ್ತದೆ.

ಇನ್ನೂ ರೈತ ಗುರುತಿನ ಚೀಟಿ ಹೊಂದಿರದ ರೈತರು ತಮ್ಮ ಪಹಣಿ (ಭೂ ದಾಖಲೆಗಳು), ಬ್ಯಾಂಕ್ ಪಾಸ್‌ಬುಕ್ ಮತ್ತು ಆಧಾರ್ ಕಾರ್ಡ್‌ನೊಂದಿಗೆ ನೋಂದಾಯಿಸಲು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ ಕಚೇರಿ ಅಥವಾ ಸಾಮಾನ್ಯ ಸೇವಾ ಕೇಂದ್ರಕ್ಕೆ ಭೇಟಿ ನೀಡಬೇಕೆಂದು ತಿಳಿಸಲಾಗಿದೆ.

ಈಗಾಗಲೇ ಎಫ್‌ಐಡಿ ಹೊಂದಿರುವವರು ತಮ್ಮ ಎಲ್ಲಾ ಸರ್ವೆ ಸಂಖ್ಯೆಗಳನ್ನು ಅದಕ್ಕೆ ಲಿಂಕ್ ಮಾಡಬಹುದು. ಪರವಾನಗಿ ಪಡೆದ ರಸಗೊಬ್ಬರ ವಿತರಕರು ಯಾವುದೇ ಮಾರಾಟವನ್ನು ಪೂರ್ಣಗೊಳಿಸುವ ಮೊದಲು ಕೆ-ಕಿಸಾನ್ ಸಾಫ್ಟ್‌ವೇರ್‌ನಲ್ಲಿ ರೈತರ ಎಫ್ ಐಡಿಯನ್ನು ಕಡ್ಡಾಯವಾಗಿ ನಮೂದಿಸಬೇಕು ಎಂದು ಹೇಳಲಾಗಿದೆ. ಚಿಲ್ಲರೆ ವ್ಯಾಪಾರಿಗಳು ತಮ್ಮ ಎಲ್ಲಾ ಈ-ಫಾರ್ಮ್ ನೋಂದಣಿಗಳನ್ನು ನವೀಕರಿಸಬೇಕಾಗುತ್ತದೆ. ಈ-ಫಾರ್ಮ್ ನೋಂದಣಿ ಇಲ್ಲದೆ ರಸಗೊಬ್ಬರಗಳನ್ನು ಮಾರಾಟ ಮಾಡುವ, ಅನುಮತಿಸಲಾದ ಬೆಲೆಗಿಂತ ಹೆಚ್ಚಿನ ಶುಲ್ಕ ವಿಧಿಸುವ ಅಥವಾ ಕೃಷಿಯೇತರ ಉದ್ದೇಶಗಳಿಗಾಗಿ ರಸಗೊಬ್ಬರವನ್ನು ಪೂರೈಸುವ ವ್ಯಾಪಾರಿಗಳ ಪರವಾನಗಿ ರದ್ದು ಮಾಡಲಾಗುತ್ತದೆ ಎಂದು ಕುಮಾರ್ ಎಚ್ಚರಿಸಿದ್ದಾರೆ.

## ಎಪ್ರಿಲ್ 10 ರಿಂದ ಟೋಲ್‌ಗಳಲ್ಲಿ ನಗದು ಪಾವತಿ ಸಂಪೂರ್ಣ ಸ್ಥಗಿತ: ಯುಪಿಐ ಪೇಮೆಂಟ್‌ಗೆ ಹೆಚ್ಚುವರಿ ಶುಲ್ಕ

ಟೋಲ್ ನಿಗದಿತ ಶುಲ್ಕಕ್ಕಿಂತ 1.25 ಪಟ್ಟು ಹೆಚ್ಚಿರಲಿದೆ ಎಂದು ಸಚಿವಾಲಯ ಗೆಜೆಟ್ ಅಧಿಸೂಚನೆಯಲ್ಲಿ ನಮೂದಿಸಿದೆ. ದೀರ್ಘ ಸಾಲು ಕಡಿತ: ಟೋಲ್ ಗೇಟ್‌ಗಳಲ್ಲಿ ದೀರ್ಘ ಸರತಿ ಸಾಲುಗಳನ್ನು ಕಡಿಮೆ ಮಾಡುವುದು ಮತ್ತು ಪ್ರಯಾಣಿಕರಿಗೆ ಹೆದ್ದಾರಿ ಪ್ರಯಾಣವನ್ನು ಸುಗಮಗೊಳಿಸುವ ಹಿನ್ನೆಲೆಯಲ್ಲಿ ಈ ಕ್ರಮ ವಹಿಸಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ (ಫೆಏಅಐ) ಅಧಿಕಾರಿ ತಿಳಿಸಿದ್ದಾರೆ.

ಎಪ್ರಿಲ್ 10 ರಿಂದ ಟೋಲ್ ಪ್ಲಾಜಾಗಳಲ್ಲಿ ಇನ್ನು ಮುಂದೆ ನಗದು ಪಾವತಿ ಇರುವುದಿಲ್ಲ. ಫಾಸ್ಟ್‌ಟ್ಯಾಗ್ ಟೋಲ್ ಕಟ್ಟುವ ಮೊದಲ ವಿಧಾನವಾಗಿರಲಿದೆ. ಆದಾಗ್ಯೂ, ಫಾಸ್ಟ್‌ಟ್ಯಾಗ್ ಹೊಂದಿಲ್ಲದ ವಾಹನಗಳು ಯುಪಿಐ ಮೂಲಕ ಹಣ ಪಾವತಿ ಮಾಡಲು ಅವಕಾಶ ಇರುತ್ತದೆ. ಒಂದು ವೇಳೆ ಎರಡೂ ಮಾದರಿಯಲ್ಲಿ ಟೋಲ್ ಪಾವತಿ ಮಾಡದಿದ್ದರೆ ಅಂತಹ ವಾಹನಗಳ ಮುಂದಿನ ಪ್ರಯಾಣಕ್ಕೆ ಅನುಮತಿಸಲಾಗುವುದಿಲ್ಲ ಎಂದು ಅಧಿಕಾರಿ ಹೇಳಿದ್ದಾರೆ.

ಯುಪಿಐ ಪಾವತಿಗೆ ಹೆಚ್ಚಿನ ಶುಲ್ಕ: ಒಂದು ವೇಳೆ ವಾಹನ ಬಳಕೆದಾರರು ಫಾಸ್ಟ್‌ಟ್ಯಾಗ್ ಇಲ್ಲದೆ ಟೋಲ್ ಪ್ಲಾಜಾವನ್ನು ಪ್ರವೇಶಿಸಿದರೆ ಯುಪಿಐ ಮೂಲಕ ಶುಲ್ಕ ಪಾವತಿಸಲು ಆಯ್ಕೆ ಮಾಡಿಕೊಳ್ಳಬಹುದು. ಆದರೆ, ನಿಬಂಧನೆಗಳ ಅನುಸಾರ ಅಂತಹ ವಾಹನಗಳಿಗೆ ನಿಗದಿತ ಟೋಲ್ ಶುಲ್ಕಕ್ಕಿಂತ 1.25 ಪಟ್ಟು ಹೆಚ್ಚುವರಿ ಹಣ ಪಾವತಿಸಬೇಕು ಎಂದು ಅಧಿಕಾರಿ ತಿಳಿಸಿದ್ದಾರೆ.

ವಾರ್ಷಿಕ ಪಾಸ್ ವ್ಯವಸ್ಥೆ: ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ವಾಹನ ಬಳಕೆದಾರರಿಗೆ ಅನುಕೂಲವಾಗಲು ವಾರ್ಷಿಕ ಪಾಸ್ ವ್ಯವಸ್ಥೆಯನ್ನು ಜಾರಿಗೆ ತಂದಿದೆ. ಅದರಂತೆ ವರ್ಷಕ್ಕೆ 3 ಸಾವಿರ ರೂಪಾಯಿ ಪಾವತಿಸಿ ಯಾವುದೇ ರಾಷ್ಟ್ರೀಯ ಹೆದ್ದಾರಿಗಳಲ್ಲಿ 200 ಟೋಲ್ ಕ್ರಾಸಿಂಗ್ ಮಾಡಲು ಅವಕಾಶವಿರುತ್ತದೆ. ಈಗಾಗಲೇ 50 ಲಕ್ಷ ಬಳಕೆದಾರರು ಈ ವಾರ್ಷಿಕ ಪಾಸ್ ಅನ್ನು ಬಳಕೆ ಮಾಡುತ್ತಿದ್ದಾರೆ. ಇದರ ಮೂಲಕ ಒಟ್ಟು 26.55 ಕೋಟಿ ರೂಪಾಯಿ ವಹಿವಾಟು ನಡೆಸಲಾಗಿದೆ. ದೇಶದಲ್ಲಿ ವಿವಿಧ ರಾಷ್ಟ್ರೀಯ ಹೆದ್ದಾರಿಗಳು ಮತ್ತು ಎಕ್ಸ್‌ಪ್ರೆಸ್‌ವೇಗಳಲ್ಲಿ 1,150 ಕ್ಕೂ ಹೆಚ್ಚು ಟೋಲ್ ಪ್ಲಾಜಾಗಳಿವೆ.

## ಬಿಜೆಪಿ, ಆರ್‌ಎಸ್‌ಎಸ್ ವಿಷಕಾರಿ ಹಾವುಗಳಂತೆ, ಖರ್ಗೆ ವಿರುದ್ಧ ಪೊಲೀಸರು, ಚುನಾವಣಾ ಆಯೋಗಕ್ಕೆ ಬಿಜೆಪಿ ದೂರು..!

ಅಲ್ಲದೇ ಅವರ ಬೌದ್ಧಿಕ ದಿವಾಳಿತನವನ್ನು ಸಹ ಬಹಿರಂಗಪಡಿಸುತ್ತದೆ ಎಂದು ಕಲಿತಾ ವಾಗ್ದಾಳಿ ನಡೆಸಿದ್ದಾರೆ.

ಏಪ್ರಿಲ್ 6 ರಂದು ಶ್ರೀಭೂಮಿ ಜಿಲ್ಲೆಯ ನಿಲಂಬಜಾರ್‌ನಲ್ಲಿ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಖರ್ಗೆ, ಬಿಜೆಪಿ, ಆರ್‌ಎಸ್‌ಎಸ್‌ವಿಷಕಾರಿ ಹಾವುಗಳಂತೆ ಅವುಗಳನ್ನು ಹೊಡೆದು ಕೊಲ್ಲಬೇಕು ಎಂದು ಹೇಳಿದ್ದರು.

ಈ ಹೇಳಿಕೆಯನ್ನು ಅಸ್ಸಾಂ ಬಿಜೆಪಿ ಘಟಕ ಬಲವಾಗಿ ಖಂಡಿಸುತ್ತದೆ, ಇದು ಹಿಂದೂ ನಂಬಿಕೆಗಳು ಮತ್ತು ಸಂಪ್ರದಾಯಗಳಿಗೆ ಸಂಪೂರ್ಣ ಅವಮಾನವಾಗಿದೆ. ಇಂತಹ ಹೇಳಿಕೆಗಳು ಖಂಡನೀಯ ಮಾತ್ರವಲ್ಲ, ಸಾಮಾಜಿಕ ಸೌಹಾರ್ದತೆಗೆ ಅಪಾಯಕಾರಿಯೂ ಹೌದು ಎಂದು ಕಲಿತಾ ಹೇಳಿದ್ದಾರೆ.

ಕಾಂಗ್ರೆಸ್ ರಾಜಕೀಯ ಕಾರಣಕ್ಕಾಗಿ ಇತರ ಧರ್ಮಗಳನ್ನು ವೈಭವೀಕರಿಸುತ್ತಾ ಸನಾತನ ಸಂಸ್ಕೃತಿಯನ್ನು ಉದ್ದೇಶಪೂರ್ವಕವಾಗಿ ಹಾಳುಮಾಡಲು ಪ್ರಯತ್ನಿಸುತ್ತಿದೆ. ಈ ಒಡಕಿನ ವಿಧಾನವನ್ನು ಈಗಾಗಲೇ ಅಸ್ಸಾಂ ಮತ್ತು ರಾಷ್ಟ್ರದ ಜನರು ತಿರಸ್ಕರಿಸಿದ್ದಾರೆ. ಪ್ರಚೋದನಕಾರಿ ಮತ್ತು ಸಮಾಜಘಾತುಕ ಹೇಳಿಕೆ ನೀಡಿದ ಆರೋಪದ ಮೇಲೆ ಖರ್ಗೆ ವಿರುದ್ಧ ತಕ್ಷಣವೇ ಕಾನೂನು ಕ್ರಮ ಜರುಗಿಸಬೇಕೆಂದು ಬಿಜೆಪಿ ಒತ್ತಾಯಿಸಿದೆ ಎಂದು ಅವರು ಹೇಳಿದ್ದಾರೆ.126 ಸದಸ್ಯ ಬಲದ ಅಸ್ಸಾಂ ವಿಧಾನಸಭೆಗೆ ಏಪ್ರಿಲ್ 9 ರಂದು ಚುನಾವಣೆ ನಡೆಯಲಿದ್ದು, ಮೇ 4 ರಂದು ಮತ ಎಣಿಕೆ ನಡೆಯಲಿದೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L